ಸಂಪುಟ : 10 ಸಂಚಿಕೆ: 219 ಪುಟ : 4+2 ಬೆಲೆ: 3.00 ಶುಕ್ರವಾರ ಅಕ್ಟೋಬರ್ 10 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 219 Pages : 4+2 Price : 3.00 Friday October 10 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಬಿ.ಬಿ. ಅಸೂಟಿ ನೇತೃತ್ವದಲ್ಲಿ ಪಂಚ ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆ । ಸಭೆಗೆ ಗೈರಾದ ಅಧಿಕಾರಿಗಳಿಗೆ ಶೋಕಾಸ್ ನೋಟಿಸ್ ಜಾರಿಗೊಳಿಸಲು ಸೂಚನೆ

# ಗ್ಯಾರಂಟಿ ಯೋಜನೆಗಳಡಿ ಗದಗ ಜಿಲ್ಲೆಯಲ್ಲಿ ಉತ್ತಮ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಡಿ ಗದಗ ಜಿಲ್ಲೆಯಲ್ಲಿ ಉತ್ತಮ ಸಾಧನೆ ದಾಖಲಾಗಿದೆ. ಸೆಪ್ಟೆಂಬರ್ ಅಂತ್ಯದವರೆಗೆ ಜಿಲ್ಲೆಯಾದ್ಯಂತ ಯೋಜನೆಗಳ ಅನುಷ್ಠಾನ ಶೇ.99ರಷ್ಟು ಯಶಸ್ವಿಯಾಗಿ ನಡೆದಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ತಿಳಿಸಿದರು.

ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಕುರಿತಂತೆ ಜಿ.ಪಂ ಸಭಾಂಗಣದಲ್ಲಿ ಗುರುವಾರ ಜರುಗಿದ ಸೆಪ್ಟೆಂಬರ್ ಅಂತ್ಯದವರೆಗಿನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ 2.57 ಲಕ್ಷ ಫಲಾನುಭವಿಗಳ ಪೈಕಿ ಶೇ.99.03ರಷ್ಟು ಮಹಿಳೆಯರಿಗೆ ಪ್ರಯೋಜನ ತಲುಪಿದ್ದು, ರೂ.986.42 ಕೋಟಿ ಮೊತ್ತ ಬಿಡುಗಡೆಗೊಂಡಿದೆ. ಅನ್ನಭಾಗ್ಯ ಯೋಜನೆಯಡಿ 2.34 ಲಕ್ಷ ಕುಟುಂಬಗಳಿಗೆ ಶೇ.100ರಷ್ಟು ಅಕ್ಕಿ ವಿತರಣೆಯಾಗಿದ್ದು, ರೂ.216.82 ಕೋಟಿಯ ಸಹಾಯ ಲಭಿಸಿದೆ. ಗೃಹಜ್ಯೋತಿ ಯೋಜನೆಯಡಿ 2.73 ಲಕ್ಷ ಮನೆಗಳಿಗೆ ಶೇ. 98.46ರಷ್ಟು ಉಚಿತ ವಿದ್ಯುತ್ ಪ್ರಯೋಜನ ದೊರೆತಿದ್ದು, ರೂ.247.24 ಕೋಟಿ ಮೊತ್ತ ಬಿಡುಗಡೆಗೊಂಡಿದೆ. ಯುವ ನಿಧಿ ಯೋಜನೆಯಡಿ 5,800 ಯುವಕರು ಶೇ.100ರಷ್ಟು ಸಹಾಯವನ್ನು ಪಡೆದಿದ್ದು, ರೂ. 12.92 ಕೋಟಿಯ ನೆರವು ನೀಡಲಾಗಿದೆ. ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಪ್ರಯಾಣದ ಸೌಲಭ್ಯ ಶೇ.100ರಷ್ಟು ಅನುಷ್ಠಾನಗೊಂಡಿದ್ದು, ರೂ.404.12 ಕೋಟಿಯಷ್ಟು ಪ್ರಯೋಜನ ದೊರೆತಿದೆ ಎಂದು ವಿವರಿಸಿದರು.

> ತಾಲೂಕಾ ಮಟ್ಟದ ಹಾಗೂ ಜಿಲ್ಲಾ ಮಟ್ಟದ ಸರ್ಕಾರಿ ಸಭೆ-ಸಮಾರಂಭಗಳಲ್ಲಿ ಗ್ಯಾರಂಟಿ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರನ್ನು ಶಿಷ್ಟಾಚಾರದಂತೆ ಇಲಾಖಾಧಿಕಾರಿಗಳು ಆಹ್ವಾನಿಸಬೇಕು. ಈ ಕುರಿತು ಜಿ.ಪಂನಿಂದ ಸಂಬಂಧಿತ ಇಲಾಖೆಗಳಿಗೆ ಸರ್ಕಾರದ ಸುತ್ತೋಲೆ ತಲುಪಿಸಬೇಕು. ಗ್ಯಾರಂಟಿ ಸಮಿತಿಗೆ ಖುದ್ದಾಗಿ ಅಧಿಕಾರಿಗಳು ನಿಗದಿಪಡಿಸಿದ ಸಮಯಕ್ಕೆ ಅಗತ್ಯ ದಾಖಲೆಗಳೊಂದಿಗೆ ಹಾಜರಾಗಬೇಕು. ಅನಿವಾರ್ಯ ಸಂದರ್ಭದಲ್ಲಿ ಅನುಮತಿಯೊಂದಿಗೆ ತೆರಳಲು ಅವಕಾಶ ನೀಡಲಾಗುವುದು. ವಿನಾಕಾರಣ ಸಭೆಗೆ ಗೈರಾದ ಅಧಿಕಾರಿಗಳಿಗೆ ಶೋಕಾಸ್ ನೋಟೀಸ್ ಜಾರಿಗೊಳಿಸುವಂತೆ ಜಿ.ಪಂ ಉಪಕಾರ್ಯದರ್ಶಿಗಳಿಗೆ ಬಿ.ಬಿ. ಅಸೂಟಿ ನಿರ್ದೇಶನ ನೀಡಿದರು.

ಜಿಲ್ಲೆಯ ಬಸ್ ನಿಲ್ದಾಣಗಳ ಅವ್ಯವಸ್ಥೆ ಕುರಿತಂತೆ ಮಾತನಾಡಿದ ಅವರು, ಎಲ್ಲ ತಾಲೂಕಾ ಹಾಗೂ ಹೋಬಳಿ ಮಟ್ಟದ ಬಸ್ ನಿಲ್ದಾಣಗಳಲ್ಲಿನ ಕಸ ವಿಲೇವಾರಿ ಆಗಬೇಕು. ಸಾರ್ವಜನಿಕರಿಗೆ ಉತ್ತಮ ವಾತಾವರಣ ಕಲ್ಪಿಸಿಕೊಡಬೇಕು. ಜೊತೆಗೆ ಆಸನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಲಭ್ಯವಿರುವಂತೆ ಸಂಬಂಧಿತ ಅಧಿಕಾರಿಗಳು ಗಮನಹರಿಸುವಂತೆ ಸೂಚಿಸಿದರು.

ಬಿಪಿಎಲ್ ಕುಟುಂಬಕ್ಕೆ ಈವರೆಗೆ ಇದ್ದ 1.20 ಲಕ್ಷ ರೂ ಆರ್ಥಿಕ ಮಿತಿಯನ್ನು 2.50 ಲಕ್ಷ ರೂ.ಗಳಿಗೆ ಅಧಿಕಗೊಳಿಸುವಂತೆ ಜಿಲ್ಲಾ ಗ್ಯಾರಂಟಿ ಸಮಿತಿ ಸಭೆಯಲ್ಲಿ ಒಮ್ಮತದ ನಿರ್ಣಯ ಕೈಗೊಳ್ಳುವ ಮೂಲಕ ಸರ್ಕಾರಕ್ಕೆ ಸಭೆಯಲ್ಲಿನ ನಡಾವಳಿಗಳನ್ನು ಸಲ್ಲಿಸುವಂತೆ ತಿಳಿಸಲಾಯಿತು. ಸಭೆಯಲ್ಲಿ ಯಲಬುರ್ಗಾದಿಂದ ಗಜೇಂದ್ರಗಡಕ್ಕೆ ಬೆಳಿಗ್ಗೆ ಬಸ್ ಬಾರದಿರುವ ಕುರಿತು ಹಾಗೂ ಗದಗದಿಂದ ಗಜೇಂದ್ರಗಡಕ್ಕೆ ಸಾಯಂಕಾಲ ಹೆಚ್ಚುವರಿ ಬಸ್ ವ್ಯವಸ್ಥೆ ಕಲ್ಪಿಸುವ ಕುರಿತು ಚರ್ಚಿಸಲಾಯಿತು.

> ರೇಶನ್ ಕಾರ್ಡ್ ರದ್ದುಪಡಿಸಿದವರ ಪಟ್ಟಿಯನ್ನು ನೋಟೀಸ್ ಬೋರ್ಡ್‌ನಲ್ಲಿ ಪ್ರದರ್ಶಿಸುವ ಜೊತೆಗೆ ರದ್ದತಿಗೆ ಸೂಕ್ತ ಕಾರಣವನ್ನು ತಿಳಿಸಿಕೊಡಬೇಕು.
>
> ಇಲ್ಲದಿದ್ದಲ್ಲಿ ಫಲಾನುಭವಿಗಳಿಗೆ ಗೊಂದಲ ಸೃಷ್ಟಿಯಾಗುತ್ತದೆ ಈವರೆಗೆ ಗೃಹಲಕ್ಷ್ಮೀ ಯೋಜನೆಯಡಿ ಅರ್ಜಿ ಹಾಕಲು ಇದ್ದ ತಾಂತ್ರಿಕ ಸಮಸ್ಯೆ ಪರಿಹಾರವಾಗಿದೆ. ಆದರೆ ಆಹಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳ ಸಮನ್ವಯತೆಯ ಕೊರತೆಯಿಂದ ಗೃಹಲಕ್ಷ್ಮೀ ಯೋಜನೆಯಡಿ ಅರ್ಹರಿಗೆ ಸೌಲಭ್ಯ ವಿಳಂಬವಾಗಬಾರದು ಎಂದು ಬಿ.ಬಿ. ಅಸೂಟಿ ಸೂಚಿಸಿದರು.

ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ನೀಲಮ್ಮ ಬೋಳನವರ, ಪಿ.ಬಿ. ಅಳಗವಾಡಿ, ದೀಪಕ ಲಮಾಣಿ, ಫಕ್ರುಸಾಬ ಚಿಕ್ಕಮಣ್ಣೂರ, ಸದಸ್ಯರುಗಳಾದ ವಿವೇಕ ಯಾವಗಲ್, ಶರಣಪ್ಪ ಬೆಟಗೇರಿ, ಶಿವನಗೌಡ ಪಾಟೀಲ, ನಾಗರಾಜ ಮಡಿವಾಳರ, ದೇವಪ್ಪ ಮೋರನಾಳ, ಪುಲಕೇಶಗೌಡ ಪಾಟೀಲ, ಈಶಣ್ಣ ಹುಣಸೀಕಟ್ಟಿ, ವೀರಯ್ಯ ಮಠಪತಿ, ಆರ್.ಆರ್. ಗಡ್ಡದ್ದೇವರಮಠ ಸೇರಿದಂತೆ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮಲ್ಲಿಕಾರ್ಜುನ ಚಳಗೇರಿ, ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಯಲಿಶಿರೂರ, ಹರ್ತಿ ಗ್ರಾ.ಪಂಗಳಲ್ಲಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಅಹವಾಲು ಸ್ವೀಕಾರ ಸಭೆ

# ಜೀವನ ಮಟ್ಟ ಸುಧಾರಣೆಗೆ 'ಗ್ಯಾರಂಟಿ'




■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಬಡವರ ಬದುಕು ಹಸನಾಗುವಲ್ಲಿ ಮಹತ್ವದ ಪಾತ್ರ ವಹಿಸಿವೆ. ಬಡ ಜನರ ಜೀವನ ಮಟ್ಟ ಸುಧಾರಣೆಗೆ ಇವು ಸಹಕಾರಿಯಾಗಿವೆ ಎಂದು ಗದಗ ತಾಲೂಕಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾದಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದರು

ಗುರುವಾರ ಗದಗ ತಾಲೂಕಿನ ಯಲಿಶಿರೂರ ಹಾಗೂ ಹರ್ತಿ ಗ್ರಾ.ಪಂ ವ್ಯಾಪ್ತಿಯಲ್ಲಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಾರ್ವಜನಿಕ ಅಹವಾಲು ಸ್ವೀಕಾರ, ಸಮಸ್ಯೆಗಳ ಪರಿಹಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗದಗ ತಾಲೂಕಿನಲ್ಲಿ ಶೇ. 97.7ರಷ್ಟು ಗುರಿ ಸಾಧನೆ ಮಾಡಿದ್ದು, ಸಮಸ್ಯೆಗಳ ಪರಿಹಾರಕ್ಕಾಗಿ ವಿಶೇಷ ಫಭೆಯನ್ನು ಗ್ರಾ.ಪಂ ಮಟ್ಟದಲ್ಲಿ ಏರ್ಪಡಿಸಲಾಗಿದೆ. ಸಭೆಯ ಮೂಲಕ ಶೇ. ನೂರರಷ್ಟು ಗುರಿ ಸಾಧನೆ ಮಾಡಲಾಗುವುದು. ಪಂಚ ಗ್ಯಾರಂಟಿ ಯೋಜನೆಗಳು ನೇರವಾಗಿ ಫಲಾಭವಿಗಳಿಗೆ ದೊರೆಯುವ ನಿಟ್ಟಿನಲ್ಲಿ ಪ್ರತಿ ಹಂತದಲ್ಲಿ ಸಭೆ, ಪ್ರಗತಿ ಪರಿಶೀಲನೆ ನಡೆಸುತ್ತಿದ್ದು, ಸರ್ಕಾರದ ಈ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಆ ದಿಶೆಯಲ್ಲಿ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ಮಾರ್ಗದರ್ಶನದಲ್ಲಿ ಗದಗ ಮತಕ್ಷೇತ್ರದಲ್ಲಿ ಯೋಜನೆಯ ಪರಿಹಾರ ಸಭೆ ಆಯೋಜಿಸಲಾಗಿದೆ ಎಂದರು.

> ಸರ್ಕಾರ ಬಡವರ ನೆರವಿಗಾಗಿ ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳಿಂದ ಕರ್ನಾಟಕ ಇಂದು ದೇಶದಲ್ಲಿಯೇ ಮಾದರಿಯಾಗಿದೆ. ಯೋಜನೆಗಳ ಸೌಲಭ್ಯಗಳು ಬಡವರ ಬದುಕು ರೂಪಿಸುವಲ್ಲಿ ಯಶಸ್ವಿಯಾಗುತ್ತಿವೆ. ಆ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆಗಳಿಂದ ಮಾನವ ಹಕ್ಕುಗಳನ್ನು ಎತ್ತರಿಸುವಲ್ಲಿ ಸಹಕಾರಿಯಾಗಿವೆ.
>
> **– ಕೃಷ್ಣಗೌಡ ಎಚ್.ಪಾಟೀಲ.**
> ಗ್ಯಾರಂಟಿ ಪ್ರಾಧಿಕಾರದ ಸದಸ್ಯ.

ಗ್ಯಾರಂಟಿ ಯೋಜನೆ ಪ್ರಾಧಿಕಾರದ ಸದಸ್ಯ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳು ಫಲಾನುಭವಿಗಳಿಗೆ ವಿಳಂಬವಿಲ್ಲದೇ ತಲುಪಬೇಕು. ಇರುವ ತಂತ್ರಜ್ಞಾನಗಳನ್ನು ಬಳಸಿಕೊಂಡು ಜನರಿಗೆ ಯೋಜನೆಗಳು ದೊರೆಯಲು ಹಾಗೂ ಆಗುವ ಅಡಚಣೆಗಳ ನಿವಾರಣೆಗಾಗಿಯೇ ಗದಗ ತಾಲೂಕಿನ ಗ್ರಾ.ಪಂ ಮಟ್ಟದಲ್ಲಿ ಅಹವಾಲು ಸ್ವೀಕಾರ, ಸಮಸ್ಯೆಗಳಿಗೆ ಪರಿಹಾರ ಕೊಡುವ ಮೂಲ ಉದ್ದೇಶದಿಂದ ಪ್ರತಿ ಗ್ರಾ.ಪಂ ವ್ಯಾಪ್ತಿಯಲ್ಲಿ ಸಭೆ ನಡೆಸುವ ಮೂಲಕ ಬಡವರ ಕೆಲಸ ಸರಾಗವಾಗಿ ಮುಟ್ಟಲು ತಾಲೂಕಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ವಿಶೇಷ ಕಾರ್ಯವನ್ನು ಮಾಡುತ್ತಿದೆ. ಯಾವುದೇ ತಾಂತ್ರಿಕ ದೋಷಗಳು ಕಂಡುಬಂದಲ್ಲಿ ಸಂಬಂಧಿಸಿದ ಗ್ರಾ.ಪಂ ಅಧ್ಯಕ್ಷರು, ಪಿಡಿಓಗಳು ತಾಲೂಕು ಮತ್ತು ▸▸3ನೇ ಪುಟಕ್ಕೆ

# ಅಂಗಾಂಗ ದಾನ ಜಾಗೃತಿ ಕಾರ್ಯಕ್ರಮ ಇಂದು




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುನ್ಸಿಪಾಲ್ ಶಾಲಾ ಮೈದಾನದಲ್ಲಿ ಅ. 10ರಂದು ಬೆಳಿಗ್ಗೆ 10 ಗಂ-ಟೆಗೆ ಅಂಗಾಂಗ ದಾನ ಮತ್ತು ನಶಾಮುಕ್ತ ಭಾರತ ಕಾರ್ಯಕ್ರಮ ಜರುಗಲಿದೆ ಎಂದು ಜನಸೇವಾ ಸಮಿತಿ ಅಧ್ಯಕ್ಷ ವಿನಯ್ ಹುಬ್ಬಳ್ಳಿ ಹೇಳಿದರು.

ಗುರುವಾರ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ನಿಮಿತ್ತ ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧೀನ ಸಂಸ್ಥೆಯ ವಿದ್ಯಾರ್ಥಿಗಳು ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಮುನ್ಸಿಪಲ್ ಶಾಲಾ ಮೈದಾನದವರೆಗೆ ಅಂಗಾಂಗ ದಾನ ಮತ್ತು ನಶಾಮುಕ್ತ ಭಾರತದ ಜಾಗೃತಿ ಜಾಥಾ ನಡೆಸಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಬಿ.ಸಿ. ಭಗವಾನ್, ಸಿಂಡಿಕೇಟ್ ಸದಸ್ಯ ಡಾ. ಕಿರಣ ಕುಳಗೇರಿ, ಡಾ. ಸಂಕನಗೌಡ ಪಾಟೀಲ, ಹಾಗೂ ಸೆನೆಟ್ ಸದಸ್ಯ ಡಾ. ಸಂತೋಷ ಇಂಡಿ, ಡಾ. ವೀರೇಶ ಹಂಚಿನಾಳ ಮತ್ತು ಡಾ. ಕೋನರೆಡ್ಡಿ ಪಾಲ್ಗೊಳ್ಳುವರು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬಸವೇಶ್ವರ ಫಾರ್ಮಸಿ ಕಾಲೇಜಿನ ಪ್ರಾಂಶುಪಾಲ ಡಾ. ಶಫೀ ಅಹ್ಮದ ಹವಾಲ್ದಾರ, ಜಿಮ್ಸ್ ಕಾಲೇಜಿನ ಅಧ್ಯಾಪಕ ಡಾ. ಸ್ಟಿಫನ್ ಜಾನ್ ಹಾಜರಿದ್ದರು.

### ಜಿ.ಪಂ ಸಾಮಾನ್ಯ ಸಭೆಯಲ್ಲಿ ರಮಣದೀಪ್ ಚೌಧರಿ ಖಡಕ್ ಸೂಚನೆ

# ಅಂಗನವಾಡಿ ಕೇಂದ್ರಗಳನ್ನು ಮಾದರಿಯಾಗಿಸಿ



> ಇದೇ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ್‌ದ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗ್ರಂಥಾಲಯ ಇಲಾಖೆ, ಆರೋಗ್ಯ ಇಲಾಖೆ, ಸಮಾಜ ಕಲ್ಯಾಣ, ಮೀನುಗಾರಿಕೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದರು. ಹಾಗೂ ಜಿ.ಪಂನ 5 ಇಲಾಖೆಗಳ (ಚೇಂಜ್ ಆಫ್ ವರ್ಕ್) ಕಾರ್ಯ ಬದಲಾವಣೆಯ ಕಾಮಗಾರಿಗಳಿಗೆ ಅನುಮೋದನೆ ನೀಡಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳು ಸುಸಜ್ಜಿತ ವ್ಯವಸ್ಥೆ ಒಳಗೊಂಡಂತೆ ಮಾದರಿಯಾಗಬೇಕು ಹಾಗೂ ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಕಟ್ಟಡಗಳನ್ನು ಪುನರ್ ನಿರ್ಮಾಣ ಮಾಡಲು ಕ್ರಮ ವಹಿಸಬೇಕು ಎಂದು ರಾಜ್ಯ ಸರ್ಕಾರದ ಯೋಜನೆ, ಕಾರ್ಯಕ್ರಮ, ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿ ರಮಣದೀಪ್ ಚೌಧರಿ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಸಭಾಂಗಣದಲ್ಲಿ ಬುಧವಾರ ಜರುಗಿದ ಜಿ.ಪಂ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಅಂಗನವಾಡಿಗಳಿಗೆ ಬೇಕಾಗಿರುವ ಮೂಲಭೂತ ಸೌಲಭ್ಯಗಳ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಿಂದ ಮಾಹಿತಿ ಪಡೆದ ನಂತರ ನಿರ್ದೇಶನ ನೀಡಿ, ನಿವೇಶನವಿರುವ ಕಡೆ ಹೊಸ ಅಂಗನವಾಡಿ ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳಬೇಕು ಎಂದರು.

ಸರ್ಕಾರದ ಅನುದಾನ ಸದ್ಬಳಕೆಯಾಗಬೇಕು. ಯಾವುದೇ ಕಾರಣಕ್ಕೂ ನೀಡಿದ ಅನುದಾನ ಹಿಂದಿರುಗಿ ಹೋಗದಂತೆ ಇಲಾಖೆ ಮುಖ್ಯಸ್ಥರು ಕಾರ್ಯನಿರ್ವಹಿಸಬೇಕು. ಕಾಮಗಾರಿ ಹಾಗೂ ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಇರಲಿ. ಗುಣಮಟ್ಟದ ಕಾಮಗಾರಿಗೆ ಪ್ರಥಮಾದ್ಯತೆ ವಹಿಸಿ ಇಲಾಖಾಧಿಕಾರಿಗಳು ಕಾರ್ಯ ನಿರ್ವಹಿಸುವಂತೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಚಳಗೇರಿ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

### ಲಿಂ. ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ 43ನೇ ವರ್ಷದ ಪುಣ್ಯ ಸ್ಮರಣೋತ್ಸವ

# ಸತ್ಯದ ಜೊತೆ ದೈವಶಕ್ತಿ ಸದಾ ಇರುತ್ತದೆ




> ಬದುಕಿ ಬಾಳುವ ಜೀವಾತ್ಮರಿಗೆ ಭಗವಂತ ಕೊಟ್ಟ ಕೊಡುಗೆ ಅಮೂಲ್ಯ. ಅರಿವುಳ್ಳ ಮಾನವ ಜನ್ಮ ಸಾರ್ಥಕಪಡಿಸಿಕೊಳ್ಳಲು ಶ್ರಮ ಮತ್ತು ಸಾಧನೆ ಅವಶ್ಯಕ. ಒಳ್ಳೆಯ ಕಾರ್ಯ ಮಾಡುವಾಗ ಎಡರು-ತೊಡರುಗಳು ಮಹಾತ್ಮರಿಗೂ ಬಿಟ್ಟಿಲ್ಲ. ಒಳ್ಳೆಯವರಿಗೆ ಇರುವಷ್ಟು ವೈರಿಗಳು ದುರ್ಜನರಿಗೆ ಇರುವುದಿಲ್ಲ. ದುರ್ಜನರಿಗೆ ಇರುವಷ್ಟು ಸ್ನೇಹಿತರು ಒಳ್ಳೆಯವರಿಗೆ ಇರುವುದಿಲ್ಲ. ಮೌಲ್ಯಗಳ ಉಳಿವು-ಅಳಿವು ಮಾನವನ ಆಚರಣೆಯಲ್ಲಿವೆ.
>
> **– ಡಾ. ವೀರಸೋಮೇಶ್ವರ ಜಗದ್ಗುರುಗಳು.**
> ಶ್ರೀ ರಂಭಾಪುರಿ ಪೀಠ, ಬಾಳೆಹೊನ್ನೂರು.

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸತ್ಯ ಮನುಷ್ಯ ಜೀವನವನ್ನು ಬದಲಿಸುತ್ತದೆ. ನಮ್ಮ ನಡೆ-ನುಡಿಗಳು ಯಾವಾಗಲೂ ಸತ್ಯದ ಪರವಾಗಿರಬೇಕು. ಸುಳ್ಳಿನ ಜೊತೆ ದುಷ್ಟ ಶಕ್ತಿ ಇದ್ದರೆ, ಸತ್ಯದ ಜೊತೆ ದೈವ ಶಕ್ತಿ ಸದಾ ಇರುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಮುಕ್ತಿಮಂದಿರ ಕ್ಷೇತ್ರದಲ್ಲಿ ಲಿಂ. ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ 43ನೇ ವರ್ಷದ ಪುಣ್ಯ ಸ್ಮರಣೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ನೀತಿವಂತರು ನಿರಾಶರಾಗದೇ ನೋವು ನುಂಗಿ ನಲಿವನ್ನು ಹೊಂದಿ ಮುನ್ನಡೆಯುಬೇಕು. ನೀತಿ ಸಂಹಿತೆ ಅರಿತವನಿಗೆ ನೆಮ್ಮದಿ ಸದಾ ಇರುತ್ತದೆ. ಬರುವ ಆತಂಕಗಳನ್ನು ಗಮನಿಸದೇ, ಅಂಜದೇ ಅಳುಕದೇ ಲಿಂ. ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಸತ್ಯ ಸಂಸ್ಕೃತಿ ಸಂವರ್ಧಿಸುವುದರಲ್ಲಿ ಶ್ರಮಸಿದ್ದನ್ನು ಯಾರೂ ಮರೆಯಲು ಸಾಧ್ಯವಿಲ್ಲ ಎಂದರು.

ನೇತೃತ್ವ ವಹಿಸಿದ್ದ ಮುಕ್ತಿಮಂದಿರ ಪಟ್ಟಾಧ್ಯಕ್ಷರಾದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವಿಚಾರ ವಿಮರ್ಶೆಗಳು ಸಂಸ್ಕೃತಿಯ ಮೇಲೆ ಹೊಸ ಬೆಳಕು ಮೂಡಿಸಬೇಕೇ ಹೊರತು ಜನರನ್ನು ನಾಸ್ತಿಕರನ್ನಾಗಿ ಮಾಡಬಾರದು. ತಾಳ್ಮೆ ಮತ್ತು ಸಹನೆಯ ಗುಣಗಳು ಮನುಷ್ಯನಲ್ಲಿ ಇಲ್ಲದಿರುವುದೇ ಇಂದಿನ ಅಶಾಂತಿ ಮತ್ತು ಅತೃಪ್ತಿಗಳಿಗೆ ಕಾರಣ. ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ ಸಂಕಲ್ಪದಂತ ತ್ರಿಕೋಟಿ ಶಿವಲಿಂಗ ಪ್ರತಿಷ್ಠಾಪನೆಯ ಕಾಲ ಇದೀಗ ಕೂಡಿ ಬರುತ್ತಿದ್ದು, ಈ ಮಹತ್ಕಾರ್ಯಕ್ಕಾಗಿ ತಮ್ಮೆಲ್ಲರ ಸೇವೆ ಸದಾ ಮೀಸಲಾಗಿರಲಿ ಎಂದರು.

> ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರಾದ ಡಾ. ಶಾಮನೂರು ಶಿವಶಂಕರಪ್ಪನವರಿಗೆ ಕೊಡಮಾಡಿದ 'ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಪ್ರಶಸ್ತಿ'ಯನ್ನು ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ ಶ್ರೀ ರಂಭಾಪುರಿ ಜಗದ್ಗುರುಗಳಿಂದ ಸ್ವೀಕರಿಸಿದರು. ಮುಖ್ಯ ಅತಿಥಿಗಳಾಗಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದ್ದೇವರಮಠ, ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿದ್ದರು.

ಸಮಾರಂಭ ಉದ್ಘಾಟಿಸಿದ ದಾವಣಗೆರೆ ▸▸3ನೇ ಪುಟಕ್ಕೆ



ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಶೇ.100ರಷ್ಟು ಪೂರ್ಣಗೊಳಿಸಿದ ಶಿಕ್ಷಕ ಸೈಯೀದ ತಹ್ಮದ್ ಮುಲ್ಲಾ ಅವರಿಗೆ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಶಂಕರಾನಂದ ಬನಶಂಕರಿ ಅವರು ಅಭಿನಂದನಾ ಪತ್ರ ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ ಸಿಂದಗಿ, ಸಮೀಕ್ಷೆ ಮೇಲ್ವಿಚಾರಕಿ ಸುಮಿತಾ ಹಿರೇಮಠ, ಸಿಆರ್‌ಪಿ ಶೋಭಾ ಹಾಗೂ ಪಾಲಿಕೆಯ ನೋಡಲ್ ಅಧಿಕಾರಿ ಶೌಕತ್ ಸುಂಕದ್ ಉಪಸ್ಥಿತರಿದ್ದರು.

## ಪ್ರತಿ ಕುಟುಂಬದ ಕನಿಷ್ಠ ಒಬ್ಬ ಸದಸ್ಯನಿಗೆ ಸರ್ಕಾರಿ ನೌಕರಿ ಒದಗಿಸಲು ಕಾಯ್ದೆ: ತೇಜಸ್ವಿ ಯಾದವ್ ಭರವಸೆ



■ವಿಜಯಸಾಕ್ಷಿ ಸುದ್ದಿ, ಬಿಹಾರ

ವಿಧಾನಸಭಾ ಚುನಾವಣೆಗೆ ಮುನ್ನ ಪ್ರಮುಖ ಘೋಷಣೆ ಮಾಡಿರುವ ರಾಷ್ಟ್ರೀಯ ಜನತಾ ದಳ (ಆರ್‌ಜೆಡಿ) ನಾಯಕ ತೇಜಸ್ವಿ ಪ್ರಸಾದ್ ಯಾದವ್, ಬಿಹಾರದಲ್ಲಿ ಆರ್‌ಜೆಡಿ ನೇತೃತ್ವದಲ್ಲಿ ವಿರೋಧ ಪಕ್ಷಗಳ ಇಂಡಿಯಾ ಮೈತ್ರಿಕೂಟ ಅಧಿಕಾರಕ್ಕೆ ಬಂದರೆ, ರಾಜ್ಯದ ಪ್ರತಿ ಕುಟುಂಬದ ಕನಿಷ್ಠ ಒಬ್ಬ ಸದಸ್ಯನಿಗೆ ಸರ್ಕಾರಿ ಉದ್ಯೋಗ ಖಚಿತಪಡಿಸುವ ಕಾಯ್ದೆ ತರಲಾಗುವುದು ಎಂದಿದ್ದಾರೆ.

ಪಾಟ್ನಾದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹೊಸ ಸರ್ಕಾರ ರಚನೆಯಾದ 20 ದಿನಗಳಲ್ಲಿ ಪ್ರಸ್ತಾವಿತ ಕಾಯ್ದೆಯನ್ನು ಪರಿಚಯಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. "ಎನ್‌ಡಿಎಗೆ 20 ವರ್ಷಗಳಲ್ಲಿ ಯುವಕರಿಗೆ ಉದ್ಯೋಗ ನೀಡಲು ಸಾಧ್ಯವಾಗಿಲ್ಲ. ನಾವು ಅಧಿಕಾರಕ್ಕೆ ಬಂದ 20 ದಿನಗಳಲ್ಲಿ ಕಾಯ್ದೆ ಜಾರಿಗೆ ತರುತ್ತೇವೆ ಮತ್ತು 20 ತಿಂಗಳೊಳಗೆ ಅದರ ಅನುಷ್ಠಾನವನ್ನು ಖಚಿತಪಡಿಸುತ್ತೇವೆ" ಎಂದು ಹೇಳಿದ್ದಾರೆ.

"2020ರ ವಿಧಾನಸಭಾ ಚುನಾವಣೆಯಲ್ಲೂ ಯುವಕರಿಗೆ ಉದ್ಯೋಗ ನೀಡುವ ಭರವಸೆ ನೀಡಿದ್ದೆವು. ನಮ್ಮ ಮಹಾ ಮೈತ್ರಿಕೂಟ ಸರ್ಕಾರದ 17 ತಿಂಗಳ ಆಡಳಿತದಲ್ಲಿ ಐದು ಲಕ್ಷ ಯುವಕರಿಗೆ ಉದ್ಯೋಗ ನೀಡಲಾಗಿದೆ. ಹಾಗಾದರೆ, ನಮಗೆ ಐದು ವರ್ಷಗಳ ಪೂರ್ಣ ಅವಧಿ ಸಿಕ್ಕಿದ್ದರೆ ಏನಾಗುತ್ತಿತ್ತು ಎಂದು ಊಹಿಸಿ" ಎಂದಿದ್ದಾರೆ.

ನವೆಂಬರ್ 6 ಮತ್ತು 11 ರಂದು ಎರಡು ಹಂತಗಳಲ್ಲಿ ಬಿಹಾರದಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ.

## ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯವಾಗಲಿ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ಉತ್ತರ ಕರ್ನಾಟಕಕ್ಕೆ ಮಲತಾಯಿ ಧೋರಣೆ ಅನುಸರಿಸುತ್ತಿರುವ ಕಾರಣ ಉತ್ತರ ಕರ್ನಾಟಕದ 14 ಜಿಲ್ಲೆಗಳ ಅಭಿವೃದ್ಧಿ ಶೂನ್ಯವಾಗಿದೆ. ಇದನ್ನು ಗಂಭೀರವಾಗಿ ಪರಿಗಣಿಸಿರುವ ಕಾಗವಾಡದ ಹಿರಿಯ ಶಾಸಕ ರಾಜು ಕಾಗೆ ಉತ್ತರ ಕರ್ನಾಟಕ ರಾಜ್ಯ ರಚನೆಯಾಗಲು ನೀಡಿರುವ ಹೇಳಿಕೆಗೆ ಉತ್ತರ ಕರ್ನಾಟಕದ ಹೋರಾಟಗಾರ ಎಸ್.ಎಸ್. ರಡ್ಡೇರ ಸ್ವಾಗತಿಸಿ ಬೆಂಬಲಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಳೆದ 75 ವರ್ಷಗಳಲ್ಲಿ ಉತ್ತರ ಕರ್ನಾಟಕ ಮೂಲಭೂತ ಸೌಲಭ್ಯಗಳು ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ದಕ್ಷಿಣ ಕರ್ನಾಟಕಕ್ಕಿಂತ ಅಭಿವೃದ್ಧಿಯಲ್ಲಿ ಬಹಳ ಹಿಂದಿದೆ. ದಕ್ಷಿಣ ಕರ್ನಾಟಕದ ಜಿಲ್ಲೆಗಳು ಬಹಳ ಅಭಿವೃದ್ಧಿ ಹೊಂದಿವೆ. ಅದರಲ್ಲೂ ನೀರಾವರಿ ಕ್ಷೇತ್ರದಲ್ಲಿ ದಕ್ಷಿಣ ಕರ್ನಾಟಕ ಅಭಿವೃದ್ಧಿ ಸಾಧಿಸಿದೆ. ಉತ್ತರ ಕರ್ನಾಟಕದ ಮೂಲ ಉದ್ಯೋಗವಾಗಿರುವ ಕೃಷಿಗೆ ನೀರಾವರಿ ಸಾಧನೆ ಅತ್ಯಂತ ಕಳಪೆಯಾಗಿರುವುದರಿಂದ ರೈತರ ಬದುಕು ಕಠಿಣವಾಗಿದೆ. ಉತ್ತರ ಕರ್ನಾಟಕದ ಯುವಕರು ಸಾಕಷ್ಟು ಜಮೀನು ಹೊಂದಿದ್ದರೂ ನೀರಾವರಿ, ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿ ಕೃಷಿಯಿಂದ ವಿಮುಖರಾಗಿರುತ್ತಿರುವುದ ಬಹಳ ಅಪಾಯಕರ ಬೆಳವಣಿಗೆಯಾಗಿದೆ ಎಂದು ಡಾ. ಎಸ್.ಎಸ್. ರಡ್ಡೇರ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

### ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ: ಮುಂದುವರೆದ ಬಂಜಾರರ ಅಹೋರಾತ್ರಿ ಧರಣಿ

# ಅವೈಜ್ಞಾನಿಕ ಒಳಮೀಸಲಾತಿ ನೀತಿಗೆ ವಿರೋಧ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿಗಳಲ್ಲಿನ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ ವಿರುದ್ಧವಾಗಿ ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಹಾಗೂ ಜಿಲ್ಲಾ ಬಂಜಾರ ಸಮುದಾಯದ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಗರದ ಗಾಂಧಿ ವೃತ್ತದಲ್ಲಿ ಸೋಮವಾರದಿಂದ ಪ್ರಾರಂಭವಾಗಿರುವ ಪ್ರತಿಭಟನೆ ಮತ್ತು ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ ಗುರುವಾರವೂ ಮುಂದುವರೆಯಿತು.



ಧರಣಿಯಲ್ಲಿ ಜಿಲ್ಲೆಯ ವಿವಿಧ ತಾಂಡಾಗಳ ನೂರಾರು ಜನರು ಪಾಲ್ಗೊಂಡು ಸರ್ಕಾರದ ವಿರುದ್ಧ ಘೋಷಣೆ ಕೂಗಿ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದರು. ಗುರುವಾರ ಗದಗ ಜಿಲ್ಲೆಯ 72 ತಾಂಡಾಗಳ ಪೈಕಿ ಗದಗ ತಾಲೂಕಿನ ಪಾಪನಾಶಿ ತಾಂಡಾ, ಮುಂಡರಗಿ ತಾಲೂಕಿನ ಕಕ್ಕೂರ ತಾಂಡಾ, ಶಿರಹಟ್ಟಿ ತಾಲೂಕಿನ ವರವಿ ತಾಂಡಾ, ಲಕ್ಷ್ಮೇಶ್ವರ ತಾಲೂಕಿನ ಹರದಗಟ್ಟಿ ಮತ್ತು ಮುನಿಯನ್ ತಾಂಡಾ, ಗಜೇಂದ್ರಗಡ ತಾಲೂಕಿನ ಬೈರಾಪೂರ ತಾಂಡಾ ಹಾಗೂ ನರಗುಂದ ತಾಲೂಕಿನ ಹಾಲಭಾವಿ ತಾಂಡಾಗಳ ಬಂಜಾರರು ಪ್ರತಿಭಟನೆಯಲ್ಲಿ ಭಾಗವಹಿಸಿದರು.

ಹಿಂದಿನ ಕಾಲದಲ್ಲಿ ಹೊಟ್ಟೆಪಾಡಿಗಾಗಿ ದಟ್ಟ ಅಡವಿಗಳು ಮತ್ತು ಬೆಟ್ಟ-ಗುಡ್ಡಗಳಲ್ಲಿ ನೈಸರ್ಗಿಕವಾಗಿ ದೊರೆಯುತ್ತಿದ್ದ ಅತ್ತಿ ಹಣ್ಣು, ಕವಳೆ ಹಣ್ಣು ಹಾಗೂ ಬಾದಿ ಹುಲ್ಲು ಮುಂತಾದವುಗಳನ್ನು ಮಾರಾಟ ಮಾಡುತ್ತಿದ್ದ ಬಂಜಾರರು, ಇದೇ ಪದ್ಧತಿಯನ್ನು ಪುನರಾವರ್ತಿಸಿ, ಬಾದಿ ಹುಲ್ಲು ಮಾರಾಟದ ಮೂಲಕ ಸರ್ಕಾರದ ಅವೈಜ್ಞಾನಿಕ ಒಳಮೀಸಲಾತಿ ನೀತಿಯನ್ನು ತೀವ್ರವಾಗಿ ವಿರೋಧಿಸಿದರು.

ಪ್ರತಿಭಟನೆಯಲ್ಲಿ ರವಿಕಾಂತ್ ಅಂಗಡಿ, ಸುರೇಶ್ ಮಹಾರಾಜ್, ಕೆ.ಸಿ. ನಬಾಪುರ, ಚಂದು ನಾಯಕ್, ಟಿ.ಡಿ. ಪೂಜಾರ, ಐ.ಎಸ್. ಪೂಜಾರ, ಧನುರಾಮ್ ತಂಬೂರಿ, ಗಣೇಶ್ ಕಟ್ಟಿಮನಿ, ಕೃಷ್ಣ ಲಮಾಣಿ, ಭೋಜಪ ಲಮಾಣಿ, ರಾಮಪ್ಪ ನಾಯಕ್, ರಮೇಶ್ ಕಾರಭಾರಿ, ನಾರಾಯಣ ಪೂಜಾರ್, ವಸಂತ ನಾಯಕ್, ರಾಜಣ್ಣ ಕಾರಭಾರಿ, ಹನುಮಪ್ಪ ಡಾವ, ತಾವರಪ್ಪ ಲಮಾಣಿ, ಪರಮೇಶ ಲಮಾಣಿ, ಶಂಕರ್ ಕಾರಭಾರಿ, ಧರ್ಮ ಲಮಾಣಿ, ಪಾಂಡಪ್ಪ ಲಮಾಣಿ, ರಾಮಪ್ಪ ರಾಥೋಡ್, ಹರೀಶ್ ಕುಮಾರ್, ಶಿವಾನಂದ ಸೋಮಪ್ಪ ರಾಥೋಡ್, ಠಾಕರಪ್ಪ ರಾಥೋಡ್ ಸೇರಿದಂತೆ ತಾಂಡಾಗಳ ಯುವಕರು ಹಾಗೂ ತಾಯಂದಿರು ಭಾಗವಹಿಸಿದ್ದರು.

> ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣದಿಂದ ಕೊಲಂಬೊ ಸಮುದಾಯಗಳಿಗೆ ಘೋರ ಅನ್ಯಾಯವಾಗಿದೆ. ಜಿಲ್ಲೆಯಲ್ಲಿ ಹೋರಾಟದ ಕಿಚ್ಚು ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಸರ್ಕಾರ ನಮ್ಮ ಹೋರಾಟವನ್ನು ಗಂಭೀರವಾಗಿ ಪರಿಗಣಿಸಿ ಅನ್ಯಾಯವನ್ನು ಸರಿಪಡಿಸಬೇಕು.
>
> **– ರವಿಕಾಂತ್ ಅಂಗಡಿ.**
> ಬಂಜಾರ ಹಕ್ಕು ಸಂರಕ್ಷಣಾ ಸಮಿತಿಯ
> ರಾಜ್ಯ ಪ್ರಧಾನ ಕಾರ್ಯದರ್ಶಿ.

ಶುಕ್ರವಾರ ಬೆಳದಡಿ, ಬಿಡನಾಳ, ಜಲ್ಲಿಗೇರಿ, ಉಂಡೇನಹಳ್ಳಿ ಮತ್ತು ಲಕ್ಕಲಕಟ್ಟಿ ತಾಂಡಾಗಳ ಬಂಜಾರರು ಬೆಳಿಗ್ಗೆ 11 ಗಂಟೆಗೆ ಗದಗ ನಗರದ ಚೆನ್ನಮ್ಮ ವೃತ್ತದಿಂದ ಸರ್ಕಾರದ ವಿರುದ್ಧ 'ಪೊರಕೆ ಚಳುವಳಿ' ನಡೆಸಿ, ಜಿಲ್ಲಾಧಿಕಾರಿಗಳ ಕಚೇರಿಗೆ ಮೆರವಣಿಗೆಯಲ್ಲಿ ತೆರಳಿ ಅಹೋರಾತ್ರಿ ಧರಣಿಯಲ್ಲಿ ಭಾಗವಹಿಸಲಿದ್ದಾರೆ.

## ನರೇಗಾ ಕೂಲಿಕಾರರ ಸಬಲೀಕರಣದತ್ತ ಆಡಳಿತ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಗಜೇಂದ್ರಗಡ ತಾಲೂಕಿನಲ್ಲಿ ನರೇಗಾ ಯೋಜನೆಯಡಿ ಕೆಲಸ ಮಾಡುತ್ತಿರುವ ಕೂಲಿಕಾರರ ಇ-ಕೆವೈಸಿ ಕಾರ್ಯ ಪ್ರಗತಿಯನ್ನು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಗುರುವಾರ ಬೆಳಿಗ್ಗೆ ಪರಿಶೀಲಿಸಿದರು.

ಇಟಗಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿದ ಅವರು, ನರೇಗಾ ಕೂಲಿಕಾರರ ಆಧಾರ್ ಆಧಾರಿತ ಇ-ಕೆವೈಸಿ ಪ್ರಕ್ರಿಯೆ ಹೇಗೆ ನಡೆಯುತ್ತಿದೆ ಎಂಬುದನ್ನು ಪರಿಶೀಲಿಸಿ, ಕಾರ್ಯನಿರ್ವಹಿಸುತ್ತಿದ್ದ ಬಿಎಫ್‌ಟಿ, ಡಿಇಒ ಮತ್ತು ಗ್ರಾಮ ಕಾಯಕ ಮಿತ್ರರ ಕೆಲಸವನ್ನು ಅವಲೋಕಿಸಿ, ಪ್ರತಿದಿನ ನಿಗದಿತ ಗುರಿಯಂತೆ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸಿಬ್ಬಂದಿಗೆ ಸೂಚನೆ ನೀಡಿದರು.

ನರೇಗಾ ಯೋಜನೆಯಡಿ ಮುಂದಿನ ದಿನಗಳಲ್ಲಿ ಕೂಲಿಕಾರರು ಕೆಲಸ ಪಡೆಯಬೇಕಾದರೆ ಇ-ಕೆವೈಸಿ ಕಡ್ಡಾಯವಾಗಿದೆ. ನಮ್ಮ ಗ್ರಾ.ಪಂ ಸಿಬ್ಬಂದಿ ಮನೆ-ಮನೆಗೆ ಭೇಟಿ ನೀಡಿ ಈ ಕಾರ್ಯವನ್ನು ಶ್ರಮಪೂರ್ವಕವಾಗಿ ಮಾಡುತ್ತಿದ್ದಾರೆ. ಇದರ ಪ್ರಯೋಜನವನ್ನು ಎಲ್ಲ ಕೂಲಿಕಾರರು ಪಡೆಯಬೇಕು ಎಂದು ಹೇಳಿದರು. ಗ್ರಾ.ಪಂ ಸಿಬ್ಬಂದಿ ಮನೆಗೆ ಬಂದಾಗ ಅಗತ್ಯ ದಾಖಲೆ, ಆಧಾರ್ ಮತ್ತು ಬ್ಯಾಂಕ್ ವಿವರ ನೀಡುವ ಮೂಲಕ ಎಲ್ಲರೂ ಸಹಕಾರ ನೀಡಬೇಕು. ತಾಲೂಕಿನಲ್ಲಿ ಶೇ. 100ರಷ್ಟು ಇ-ಕೆವೈಸಿ ಸಾಧಿಸುವುದು ನಮ್ಮ ಗುರಿ ಎಂದು ಕೂಲಿಕಾರರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಇಟಗಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು (PDO), ಪಂಚಾಯತ್ ಸದಸ್ಯರು, ನರೇಗಾ ಸಿಬ್ಬಂದಿ ಹಾಗೂ ಗ್ರಾ.ಪಂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ದಸರಾ ಯೋಗಾಸನ ಸ್ಪರ್ಧೆಯಲ್ಲಿ ಯಶಸ್ಸು



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರಕಾರ, ಯೋಗ ದಸರಾ ಉಪಸಮಿತಿ ಮೈಸೂರು ಇವರು ಇತ್ತೀಚೆಗೆ ಮೈಸೂರಿನ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣದ ಸಿ. ಕಾಳಿಂಗರಾವ್ ಸಭಾಂಗಣದಲ್ಲಿ ನಡೆಸಿದ ರಾಜ್ಯ ಮಟ್ಟದ ದಸರಾ ಯೋಗಾಸನ ಸ್ಪರ್ಧೆಯಲ್ಲಿ ಬಸವಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಇವರು 65 ವರ್ಷ ಮೇಲ್ಪಟ್ಟ ಪುರುಷರ ವಿಭಾಗದಲ್ಲಿ ಭಾಗವಹಿಸಿ 5ನೇ ಸ್ಥಾನ ಪಡೆದಿದ್ದಾರೆ.

ರಾಜ್ಯ ಮಟ್ಟದ ದಸರಾ ಯೋಗಾಸನ ಸ್ಪರ್ಧೆಯಲ್ಲಿ ಯಶಸ್ಸು ಗಳಿಸಿದ ಕೆ.ಎಸ್. ಪಲ್ಲೇದರಿಗೆ ಎಸ್.ವಾಂಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯದ ಆಡಳಿತಾಧಿಕಾರಿಗಳಾದ ಎಸ್.ಎಸ್. ಪಟ್ಟಣಶೆಟ್ಟಿ, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿ ವೃಂದ, ಡಾ. ಎಸ್.ಕೆ. ನಾಲತ್ವಾಡಮಠ, ಡಾ. ಎಂ.ವ್ಹಿ. ಐಹೊಳ್ಳಿ, ವಿ.ಎಚ್. ಪಾಟೀಲ, ಶಿವನಗೌಡ ಗೌಡರ ಸೇರಿದಂತೆ ಅಭಿಮಾನಿ ಬಂಧುಗಳು ಶುಭ ಹಾರೈಸಿದ್ದಾರೆ.

## ಗಾಝಾ ಕದನ ವಿರಾಮಕ್ಕೆ ಇಸ್ರೇಲ್- ಹಮಾಸ್ ಒಪ್ಪಿಗೆ

■ವಿಜಯಸಾಕ್ಷಿ ಸುದ್ದಿ, ಗಾಝಾ

ಬರೋಬ್ಬರಿ 67 ಸಾವಿರಕ್ಕೂ ಹೆಚ್ಚು ಅಮಾಯಕರ ಹತ್ಯೆ ಹಾಗೂ ಸುಂದರ ಗಾಝಾವನ್ನು ನರಕವಾಗಿಸಿದ ಬಳಿಕ ಇಸ್ರೇಲ್ ಮತ್ತು ಹಮಾಸ್ ಕದನ ವಿರಾಮಕ್ಕೆ ಒಪ್ಪಿಕೊಂಡಿದೆ ಎಂದು ವರದಿಯಾಗಿದೆ.

ಇಸ್ರೇಲ್ ಗಾಝಾ ಮೇಲೆ ಆಕ್ರಮಣ ಮಾಡಲು ಪ್ರಾರಂಭಿಸಿ ಅಕ್ಟೋಬರ್ 8, 2025ಕ್ಕೆ ಎರಡು ವರ್ಷ ಪೂರ್ಣಗೊಂಡಿದೆ. ಇದರ ಮರುದಿನ, ಅಂದರೆ ಅಕ್ಟೋಬರ್ 9, 2025ರಂದು ಈಜಿಪ್ಟ್‌ನಲ್ಲಿ ನಡೆದ ಗಾಝಾ ಶಾಂತಿ ಮಾತುಕತೆ ಫಲಪ್ರದವಾಗಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ 20 ಅಂಶಗಳ ಶಾಂತಿ ಯೋಜನೆಗೆ ಉಭಯ ಪಕ್ಷಗಳು ಸಹಿ ಹಾಕಿವೆ ಎಂದು ಸುದ್ದಿ ಸಂಸ್ಥೆ ರಾಯಿಟರ್ಸ್ ವರದಿ ಮಾಡಿದೆ.

ಈ ಹಿಂದೆ ಅನೇಕ ಬಾರಿ ಕದನ ವಿರಾಮ ಜಾರಿಗೆ ಬಂದು ಬಳಿಕ ಅದು ವಿಫಲಗೊಂಡಿತ್ತು. ಆದರೆ, ಈ ಬಾರಿಯ ಶಾಂತಿ ಒಪ್ಪಂದ ಹಿಂದಿಗಿಂತ ಆಶಾದಾಯಕವಾಗಿದೆ. ಇದು ಕೇವಲ ಇಸ್ರೇಲ್-ಪ್ಯಾಲೆಸ್ತೀನ್ ಮಾತ್ರವಲ್ಲದೆ, ಯೆಮನ್, ಲೆಬನಾನ್ ಸೇರಿದಂತೆ ಎಲ್ಲಾ ದೇಶಗಳ ಮೇಲಿನ ಆಕ್ರಮಣ ಕೊನೆಗೊಳಿಸುವ ಒಪ್ಪಂದವಾಗಿದೆ. ಈ ಮೂಲಕ ಮಧ್ಯಪ್ರಾಚ್ಯದಲ್ಲಿ ಸಂಘರ್ಷ ಶಮನವಾಗುವ ನಿರೀಕ್ಷೆಯಿದೆ ಎಂದು ರಾಯಿಟರ್ಸ್ ವರದಿ ವಿವರಿಸಿದೆ.

## ಪೋಷಣ್ ಮಾಸಾಚರಣೆ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ನರಗುಂದ

ನರಗುಂದ ಶಿಶು ಅಭಿವೃದ್ಧಿ ಯೋಜನೆ ವತಿಯಿಂದ ನರಗುಂದ ತಾಲೂಕಿನ ಸುರಕೋಡ ಗ್ರಾಮದ ಸಮುದಾಯ ಭವನದಲ್ಲಿ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಚಂದ್ರಶೇಖರ ಪಾಟೀಲ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಗ್ರಾಮದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಪೋಷಣ್ ಮಾಸಾಚರಣೆ ಶೀರ್ಷಿಕೆಯಡಿ ಗರ್ಭಿಣಿ ಮಹಿಳೆಯರಿಗೆ ಪೌಷ್ಟಿಕ ಆಹಾರ ತಯಾರಿಕೆ ಸ್ಪರ್ಧೆ, ಉತ್ತಮ ಮಗು ಆಯ್ಕೆ ಹಾಗೂ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ನೆರವೇರಿಸಿದ್ದು ಸಂತಸದ ವಿಚಾರ ಎಂದರು.

ಪೋಷಣ್ ಸಂಯೋಜಕ ಮಂಜುನಾಥ ಗುಗ್ಗರಿ ಮಾತನಾಡಿ, ಆರೋಗ್ಯವೇ ಭಾಗ್ಯ ಎಂಬ ನಾಣ್ಣುಡಿಯಂತೆ ಸದೃಢ ಆರೋಗ್ಯಕ್ಕೆ ಸಮತೋಲಿತ ಆಹಾರ ಅತಿ ಅವಶ್ಯಕ ಎಂದರು.

ಕಾರ್ಯಕ್ರಮದಲ್ಲಿ ಮಿಷನ್ ಶಕ್ತಿ ಹಾಗೂ ಮಾತೃವಂದನಾ ಯೋಜನೆಯ ಜಿಲ್ಲಾ ಸಂಯೋಜಕರಾದ ರಾಜೇಶ್ವರಿ ಉಪ್ಪಿನ್, ನೇತ್ರಾವತಿ ಹರ್ತಿಯವರು ಜಿಲ್ಲಾ ಮಹಿಳಾ ಸಬಲೀಕರಣ ಘಟಕ ವತಿಯಿಂದ ಅರಿವು ಕಾರ್ಯಕ್ರಮಗಳ ಕುರಿತು ಹಾಗೂ ಇಲಾಖೆಯಿಂದ ಮಹಿಳೆ/ಮಕ್ಕಳಿಗೆ ದೊರಕುವ ವಿವಿಧ ಸೌಲಭ್ಯಗಳ ಬಗ್ಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಉಪಾಧ್ಯಕ್ಷೆ ಮಂಜುಳಾ ತಳವಾರ, ಸದಸ್ಯರಾದ ಶಿವನಗೌಡ ರಾಯನಗೌಡ್ರ, ಆರೋಗ್ಯ ಇಲಾಖೆಯ ಐ.ಆರ್. ಗಂಜಿ, ಎಮ್.ಟಿ. ಕಲ್ಯಾಣಿ, ಕುಂಬಾರ, ಐ.ಎ. ಗುಳನ್ನವರ, ಮಂಜುಳಾ ಕುರುಬನಾಳ, ಹೇಮಾ ಪತ್ತಾರ, ಸುನಿತಾ ಹೊನ್ನಣ್ಣವರ, ಮಮತಾಜ್ ಹೊಂಗಲ್, ದಾನಮ್ಮ ಮಠಪತಿ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಆಶಾ ಕಾರ್ಯಕರ್ತೆಯರು ಇದ್ದರು. ಬೇಬಿ ದೊಡ್ಡಮನಿ ಸ್ವಾಗತಿಸಿದರು, ಶಿವಲೀಲಾ ಹಿರೇಮಠ ನಿರೂಪಿಸಿ ವಂದಿಸಿದರು.

### ನವನಗರ ಕ್ಷೇಮಾಭಿವೃದ್ಧಿ ಸಂಘದಿಂದ ಸೀಗೆ ಹುಣ್ಣಿಮೆ ಅಂಗವಾಗಿ ಬೆಳದಿಂಗಳ ಭೋಜನ

# ಭಾರತೀಯ ಹಬ್ಬಗಳು ಸಾಮರಸ್ಯದ ಸಂಕೇತ




■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಹಬ್ಬಗಳು, ಆಚರಣೆಗಳು ನೆಲಮೂಲ ಸಂಸ್ಕೃತಿಗಳನ್ನು ಪಸರಿಸುತ್ತಾ ಸಾಮರಸ್ಯದೆಡೆಗೆ ನಮ್ಮನ್ನು ಕೊಂಡೊಯ್ಯುತ್ತವೆ. ಮನುಷ್ಯನ ಬದುಕಿಗೆ ಮಣ್ಣೇ ಮೂಲಾಧಾರವಾಗಿರುವದರಿಂದ ಮಣ್ಣಿನಿಂದ ವಿವಿಧ ಮೂರ್ತಿಗಳನ್ನು ನಿರ್ಮಿಸುವ ಮೂಲಕ ಮಣ್ಣಿನ ಆರಾಧನೆಯನ್ನು ಮಾಡಲಾಗುತ್ತಿದೆ ಎಂದು ಗದುಗಿನ ಆಧ್ಯಾತ್ಮ ವಿದ್ಯಾಶ್ರಮದ ಶರಣೆ ಮೈತ್ರಾದೇವಿ ತಿಳಿಸಿದರು.

ಅವರು ಗದುಗಿನ ನವನಗರ ಕ್ಷೇಮಾಭಿವೃದ್ಧಿ ಸಂಘದವರು ಸೀಗೆ ಹುಣ್ಣಿಮೆ ಅಂಗವಾಗಿ ಏರ್ಪಡಿಸಿದ್ದ ಬೆಳದಿಂಗಳ ಭೋಜನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಭೂಮಿತಾಯಿಯನ್ನು ಆರಾಧಿಸುವ ಮೂಲಕ ಋಣವನ್ನು ತೀರಿಸುವ ಆಶಯದೊಂದಿಗೆ ಈ ಹಬ್ಬವನ್ನು ಸಡಗರದಿಂದ ಆಚರಿಸುತ್ತಾ ಬಂದಿದ್ದೇವೆ. ಭಾರತೀಯ ಹಬ್ಬ ಹರಿದಿನಗಳು ಸಾಮರಸ್ಯದ ಸಂಕೇತಗಳಾಗಿವೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಗದಗ-ಬೆಟಗೇರಿ ನಗರಸಭೆ ವಿರೋಧ ಪಕ್ಷದ ನಾಯಕ ಎಲ್.ಡಿ. ಚಂದಾವರಿ ಮಾತನಾಡಿ, ನಗರ ಪ್ರದೇಶಗಳು ಇಂದು ನಮ್ಮ ಗ್ರಾಮೀಣ ಸೊಗಡಿನಿಂದ ದೂರ ಸರಿದಿವೆ. ಆದರೆ, ರಾಜೀವಗಾಂಧಿ ನಗರದಲ್ಲಿರುವ ನವನಗರ ಬಡಾವಣೆಯಲ್ಲಿ ಇಲ್ಲಿಯ ನಾಗರಿಕರು ತಮ್ಮ ಮೂಲ ಸಂಸ್ಕೃತಿಯನ್ನು ಮರೆಯದೇ ಪ್ರತಿ ವರ್ಷ ವಿವಿಧ ಆಚರಣೆಗಳನ್ನು ಮುಂದುವರೆಸಿಕೊಂಡು ಬಂದಿರುವದು ಹೆಮ್ಮೆಯ ಸಂಗತಿ. ಈ ಬಡಾವಣೆಯ ಅಭಿವೃದ್ಧಿಗಾಗಿ ಈಗಾಗಲೇ ಸಾಕಷ್ಟು ಯೋಜನೆಗಳನ್ನು ನಗರಸಭೆ ವತಿಯಿಂದ ಜಾರಿಗೊಳಿಸಲಾಗಿದೆ. ಮುಂಬರುವ ದಿನಗಳಲ್ಲಿ ಸಮಗ್ರ ಅಭಿವೃದ್ಧಿಗಾಗಿ ಯೋಜನೆಯನ್ನು ರೂಪಿಸಲಾಗಿದ್ದು, ಅನುಷ್ಠಾನಕ್ಕಾಗಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವದೆಂದು ತಿಳಿಸಿದರು.

ಭಾರತೀಯ ಸಂಸ್ಕೃತಿ ಕುರಿತು ಉಪನ್ಯಾಸ ನೀಡಿದ ಸಾಹಿತಿ ಕ್ಷಮಾ ವಸ್ತ್ರದ, ಸಂಸ್ಕೃತಿಯನ್ನು ಮುಂದಿನ ತಲೆಮಾರಿಗೆ ವರ್ಗಾಯಿಸುವ ಮಹತ್ತರ ಜವಾಬ್ದಾರಿ ಹೆಣ್ಣುಮಕ್ಕಳದ್ದಾಗಿದೆ. ಬಹುತೇಕ ಹಬ್ಬಗಳು ಸ್ತ್ರೀಶಕ್ತಿಯ ಆರಾಧನೆಯಾಗಿದೆ. ಸಂತೋಷ, ಸಡಗರ, ಸಾಮರಸ್ಯಗಳನ್ನು ಇಮ್ಮಡಿಗೊಳಿಸುವದು ಹಬ್ಬದ ಮೂಲ ಉದ್ದೇಶ. ಈ ಹಿನ್ನೆಲೆಯಲ್ಲಿ ನಮ್ಮ ಹಿರಿಯರು ವೈಜ್ಞಾನಿಕವಾಗಿ ಈ ಆಚರಣೆಗಳನ್ನು ಜಾರಿಗೆ ತರುವ ಮೂಲಕ ಸಮಾಜದಲ್ಲಿ ಐಕ್ಯತೆಯನ್ನು ಮೂಡಿಸುವ ಕಾರ್ಯ ಮಾಡಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎಲ್.ಡಿ. ಚಂದಾವರಿ, ನಗರಸಭೆಯ ಇಂಜಿನಿಯರ್ ಬಂಡಿವಡ್ಡರ, ಕ.ವಿ.ವಿ. ಸಿಂಡಿಕೇಟ್ ಸದಸ್ಯ ಬಿ.ಬಿ. ಹೊಳಗುಂದಿ, ಜಗದೀಶ ಪೂಜಾರ, ವಿಶ್ವನಾಥ ಕಮ್ಮಾರ, ಲಾವಣ್ಯ ಬ್ಯಾಗೋಟಿ ಅವರನ್ನು ಸನ್ಮಾನಿಸಲಾಯಿತು.

ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಡಿ.ಎಸ್. ತಳವಾರ ಸ್ವಾಗತಿಸಿ ನಿರೂಪಿಸಿದರು. ಎಂ.ಪಿ. ಕಲ್ಮಠ ವಂದಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಪಿ.ಡಿ. ಕನ್ಯಾಳ, ಉಮೇಶ ದಲಭಂಜನ, ಪಿ.ಬಿ. ಹೊಂಬಾಳಿಮಠ, ವೀಣಾ ಸೋನಾರ, ಮಲ್ಲಿಕಾರ್ಜುನ ಚಳಗೇರಿ, ಕಿರಣ ಬಸರಿ, ಗಂಗಾ ಬೆಲೇರಿ, ವಿಜಯಲಕ್ಷ್ಮಿ ಮಾಂಡ್ರೆ, ಪರಿಮಳಾ ಸಾಸ್ವಿಹಳ್ಳಿ, ಮಾಲಾ ಶಿರೋಳ, ರಾಜಶೇಖರ ಕರಡಿ, ಚನ್ನಬಸಪ್ಪ ಅಕ್ಕಿ, ಮಲ್ಲಿಕಾರ್ಜುನ, ಸಂತೋಜಿ, ಸಯ್ಯದ ಹಕ್, ಪ್ರದೀಪ ಮಾಂಡ್ರೆ, ಬಸಣ್ಣ ಸವಡಿ, ಮೀನಾಕ್ಷಿ ಮುಂಡರಗಿ, ರೇಖಾ ದಲಬಂಜನ, ಉಮಾದೇವಿ ಕಣವಿ, ವಿನಾಯಕ ದೀಕ್ಷಿತ, ವಿ.ಜಿ. ಹಿರೇಮಠ, ಎಸ್.ಎ. ಹಿರೇಮಠ, ಡಾ. ಸತ್ತಿಗೇರಿ, ಜಕ್ಕಣ್ಣವರ, ಡಾ. ಹೊಸಕೇರಿ, ಕಲಾವತಿ ಹಿರೇಮಠ, ನಂದಾ ಆಸಂಗಿ, ಶಿವಕುಮಾರ ಕಾಶಪ್ಪನವರ, ರಾಜೇಶ್ವರಿ ಕಲ್ಮಠ, ಪ್ರೇಮಾ ಚಳಗೇರಿ, ಕೌಜಲಗಿ, ಜ್ಯೋತಿ ಹುನಕುಂಟಿ, ಸುಷ್ಮಾ ಹೊರಪೇಟಿ, ಪವಿತ್ರಾ ಕನ್ಯಾಳ, ಚೆನ್ನಮ್ಮ ಅಣ್ಣಿಗೇರಿ, ಜಯಶ್ರೀ ಸಜ್ಜನರ, ಶಾಂತಾ ಚಲವಾದಿ, ವಿಶಾಲಾಕ್ಷಿ ಕಪ್ಪರದ, ನೂರಜಹಾನ ಮುಜಾವರ, ರಜನಿ ಬಳ್ಳಾರಿ, ಸುಷ್ಮಾ ಬಳ್ಳಾರಿ, ಯಲ್ಲಮ್ಮ ಪರಸನಾಯಕರ ಮೊದಲಾದವರು ಭಾಗವಹಿಸಿದ್ದರು.

## 68ನೇ ಕಾಮನ್‌ವೆಲ್ತ್ ಸಂಸದೀಯ ಸಮಾವೇಶ




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೆರೆಬಿಯನ್ ಪೂರ್ವ ದ್ವೀಪರಾಷ್ಟ್ರವಾಗಿರುವ ಬಾರ್ಬೋಸ್ ದೇಶದ ರಾಜಧಾನಿ ಬ್ರಿಡ್ಜಟೌನ್ ನಗರದಲ್ಲಿ ಅಕ್ಟೋಬರ್ 6ರಿಂದ 10ರವರೆಗೆ ನಡೆಯಲಿರುವ 68ನೇ ಕಾಮನ್‌ವೆಲ್ತ್ ಸಂಸದೀಯ ಸಮಾವೇಶದ ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಪಾಲ್ಗೊಂಡಿದ್ದಾರೆ.

ಕರ್ನಾಟಕ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜ್ಯಸಭೆಯ ಉಪಸಭಾಪತಿ ಹರಿವಂಶ ಮತ್ತಿತರರು ಪಾಲ್ಗೊಂಡಿದ್ದು, ಈ ಸಮಾವೇಶದಲ್ಲಿ ಜಗತ್ತಿನ ವಿವಿಧ ದೇಶಗಳ ಪ್ರತಿನಿಧಿಗಳು, ಲೋಕಸಭಾಧ್ಯಕ್ಷರು, ರಾಜ್ಯಸಭೆಯ ಉಪ ಸಭಾಪತಿಗಳು, ವಿವಿಧ ರಾಜ್ಯಗಳ ವಿಧಾನ ಸಭೆ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ತಿನ ಸಭಾಪತಿಗಳು, ಸಚಿವರು, ರಾಜಕೀಯ ತಜ್ಞರು, ನೀತಿ ನಿರೂಪಕರು, ರಾಜಕೀಯ ಮುತ್ಸದ್ದಿಗಳು ಸೇರಿದಂತೆ ವಿವಿಧ ಗಣ್ಯರು ಪಾಲ್ಗೊಂಡಿದ್ದಾರೆ.

## ಹುಣ್ಣಿಮೆ ವಚನ ವಾಚನ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ದೇವರ ದಾಸಿಮಯ್ಯನವರ ಪುತ್ಥಳಿ ಬಳಿ 33ನೇ ವಚನ ವಾಚನ ಕಾರ್ಯಕ್ರಮ ಸೀಗೆ ಹುಣ್ಣಿಮೆಯಂದು ಜರುಗಿತು. ವಚನ ಪಿತಾಮಹ ದೇವರ ದಾಸಿಮಯ್ಯನವರ ಪುತ್ಥಳಿಗೆ ನಾರಾಯಣ ಕಂಗೂರಿ ಪೂಜೆ ಸಲ್ಲಿಸಿದರು.

ನಿವೃತ್ತ ವಿಷಯ ಪರಿವೀಕ್ಷಕ, ಸಾಹಿತಿಗಳಾದ ರಾಮಚಂದ್ರ ಹುಬ್ಬಳ್ಳಿ ವಚನ ವಾಚನ ಕಾರ್ಯಕ್ರಮ ನಡೆಸಿಕೊಟ್ಟರು. ನಗರಸಭಾ ಸದಸ್ಯ ರಾಘವೇಂದ್ರ ಯಳವತ್ತಿ, ನಗರಸಭಾ ಮಾಜಿ ಉಪಾಧ್ಯಕ್ಷ ಅಶೋಕ್ ಬಣ್ಣದ ಮುಂತಾದವರು ಮಾತನಾಡಿದರು.

ಅನುಷಾ ಮುದಗಲ್ ಪ್ರಾರ್ಥಿಸಿದರು. ಗದಗ ಜಿಲ್ಲಾ ದೇವಾಂಗ ಸಂಘದ ಜಿಲ್ಲಾಧ್ಯಕ್ಷ ದಶರಥರಾಜ ಕೊಳ್ಳಿ ಸ್ವಾಗತಿಸಿದರು.

ಶ್ರೀನಿವಾಸ ಹುಬ್ಬಳ್ಳಿ ವಂದಿಸಿದರು. ಶಂಕರ್ ಖಾಕಿ, ಸಂಕಣ್ಣ ಹಾದಿಮನಿ, ಅನಿಲ್ ಗಡ್ಡಿ, ಸರೋಜಾ ಮುದಗಲ್ ಮುಂತಾದವರಿದ್ದರು.

**ಸಹಕಾರ ಸಂಘಗಳ ರಿಟರ್ನಿಂಗ್ ಅಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕರಿಗೆ ವಿಶೇಷ ತರಬೇತಿ ಕಾರ್ಯಕ್ರಮ**

# ಸಹಕಾರಿ ಸಂಘಗಳನ್ನು ಕಾನೂನಾತ್ಮಕವಾಗಿ ಬೆಳೆಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಯಾವ ಸಹಕಾರ ಸಂಘದ ರಿಟರ್ನಿಂಗ್ ಅಧಿಕಾರಿಯಾಗಿ ನೇಮಿಸಲಾಗಿದೆಯೋ ಆ ಸಹಕಾರ ಸಂಘದ ಉಪವಿಧಿಯನ್ನು ಅಧ್ಯಯನ ಮಾಡಿ ಆಡಳಿತ ಮಂಡಲಿಯ ಸ್ವರೂಪವನ್ನು ರಿಟರ್ನಿಂಗ್ ಅಧಿಕಾರಿಗಳು ತಿಳಿದುಕೊಳ್ಳಬೇಕು. ಉಪವಿಧಿಯು ನೋಂದಣಿಯಾಗಿರುವುದನ್ನು ಖಾತ್ರಿ ಪಡಿಸಿಕೊಳ್ಳಬೇಕು. ಕಾನೂನಾತ್ಮಕವಾಗಿ ಸಹಕಾರ ಸಂಘಗಳ ನಿರ್ವಹಣೆ ಮಾಡಿಕೊಂಡು ಸಂಘಗಳನ್ನು ಬೆಳಸಬೇಕು ಎಂದು ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ ಹೇಳಿದರು.

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್, ಕೆ.ಸಿ.ಸಿ. ಬ್ಯಾಂಕ್ ಗದಗ ಇವರುಗಳ



ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯಲ್ಲಿ ಚುನಾವಣೆ ಜರುಗಲಿರುವ ಸಹಕಾರ ಸಂಘಗಳ ರಿಟರ್ನಿಂಗ್ ಅಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಹಮ್ಮಿಕೊಂಡಿದ್ದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಮಾತನಾಡಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 20ರ ಮೇರೆಗೆ ಸದಸ್ಯರು ತಮ್ಮ ಮತದಾನದ ಹಕ್ಕನ್ನು ಚಲಾಯಿಸಲು ಕಳೆದ 5 ವಾರ್ಷಿಕ ಮಹಾಸಭೆಗಳ ಪೈಕಿ ಕನಿಷ್ಠ ಯಾವುದೇ 2 ಸಭೆಗಳಿಗೆ ಹಾಜರಾಗುವುದು ಮತ್ತು ಕಳೆದ 5 ಸಹಕಾರ ವರ್ಷಗಳ ಪೈಕಿ ಕನಿಷ್ಠ ಯಾವುದೇ 2 ಸಹಕಾರ ವರ್ಷಗಳಲ್ಲಿ ಸಂಘದ ಉಪವಿಧಿಗಳಲ್ಲಿ ನಿಗದಿಪಡಿಸಿದ ಕನಿಷ್ಠ ಸೇವೆಗಳನ್ನು ಬಳಸಿಕೊಳ್ಳುವುದು ಕಡ್ಡಾಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ವಾಯ್.ಎಫ್. ಪಾಟೀಲ, ನಿರ್ದೇಶಕರಾದ ಎಸ್.ಕೆ. ಕುರಡಗಿ, ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಶಾಂತಾ

ಕೆಎಂಎಫ್ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಮಾತನಾಡಿ, ಆಡಳಿತ ಮಂಡಳಿ ಸದಸ್ಯರ ಚುನಾವಣೆ ನಡೆಸಲು ಅತ್ಯಂತ ಪ್ರಮುಖ ಅವಶ್ಯಕತೆ ಅರ್ಹ ಮತದಾರರ ಯಾದಿ. ಅನರ್ಹ ಸದಸ್ಯರಿಗೆ ನೋಟಿಸು ಹೊರಡಿಸಿದ 15 ದಿನಗಳೊಳಗಾಗಿ ಆಕ್ಷೇಪಣೆ ಸಲ್ಲಿಸಲು ತಿಳಿಸಬೇಕು. ಯೂನಿಯನ್‌ದ ವತಿಯಿಂದ ಜರುಗುವ ಇಂತಹ ತರಬೇತಿ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ಎಚ್.ಎಂ, ಧಾರವಾಡ ಹಾಲು ಒಕ್ಕೂಟದ ವಿಸ್ತರಣಾಧಿಕಾರಿ ಸಿ.ಎಸ್. ಕಲ್ಲನಗೌಡರ, ಡಿ.ಐ. ನದಾಫ್, ಬಸವರಾಜ ಜುಮ್ಮಣ್ಣವರ, ಕಿರಣಕುಮಾರ ಹುಗ್ಗಿ ಉಪಸ್ಥಿತರಿದ್ದರು.

ತರಬೇತಿ ಕಾರ್ಯಾಗಾರದಲ್ಲಿ ಸಹಕಾರ ಸಂಘಗಳ ಆಡಳಿತ ಮಂಡಲಿ ಚುನಾವಣೆ ಜರುಗಿಸುವ ವಿಧಿ-ವಿಧಾನಗಳ ಕುರಿತು ಶಂಕರ ಎಸ್.ಕರಬಸಣ್ಣವರ, ಸಹಕಾರ ಸಂಘಗಳ ಪದಾಧಿಕಾರಿಗಳ ಚುನಾವಣೆ ಜರುಗಿಸುವ ಕುರಿತು ಸುನೀಲ್‌ಕುಮಾರ ಚಳಗೇರಿ ಉಪನ್ಯಾಸ ನೀಡಿದರು.

ಗಂಗಾಪೂರ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಕಾರ್ಯದರ್ಶಿ ರೇಣುಕಾ ಈರನಗೌಡ್ರ ಪ್ರಾರ್ಥಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ಮಹಿಳಾ ಸಹಕಾರ ಶಿಕ್ಷಕಿ ಆರ್.ಸಿ. ಯಲಿಗಾರ ವಂದಿಸಿದರು.

# ಸತ್ಯದ ಜೊತೆ ದೈವಶಕ್ತಿ ಸದಾ ಇರುತ್ತದೆ

▸▸ ಮೊದಲನೇ ಪುಟದಿಂದ

ಲೋಕಸಭಾ ಕ್ಷೇತ್ರದ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ ಶಾಮನೂರ ಮಾತನಾಡಿ, ಪರಮ ಪೂಜ್ಯ ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ 43ನೇ ವರ್ಷದ ಪುಣ್ಯ ಸ್ಮರಣೆಯಲ್ಲಿ ಪಾಲ್ಗೊಳ್ಳುವ ಸೌಭಾಗ್ಯ ಪ್ರಾಪ್ತವಾಗಿರುವುದು ಪೂರ್ವಾರ್ಜಿತ ಪುಣ್ಯದ ಫಲವೆಂದು ಭಾವಿಸುವೆ. 'ಮಾನವ ಧರ್ಮಕ್ಕೆ ಜಯವಾಗಲಿ-ಧರ್ಮದಿಂದಲೇ ವಿಶ್ವಕ್ಕೆ ಶಾಂತಿ' ಎಂಬ ಸಂದೇಶ ನಾಡಿನ ಜನಮನದಲ್ಲಿ ಸದಾ ಹಸಿರಾಗಿದೆ. ಅವರ ತಪೋಶಕ್ತಿ ನಮ್ಮೆಲ್ಲರನ್ನು ಸನ್ಮಾರ್ಗಕ್ಕೆ ಕೊಂಡೊಯ್ಯಲೆಂದು ಪ್ರಾರ್ಥಿಸಿದರು.

ಎಮ್ಮಿಗನೂರು ವಾಮದೇವ ಮಹಾಂತ ಶಿವಾಚಾರ್ಯರು ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ ಜೀವನದ ಸಿದ್ಧಿ ಸಾಧನೆಗಳನ್ನು ಕುರಿತು ಉಪದೇಶಾಮೃತವನ್ನಿತ್ತರು. ಬಂಕಾಪುರ ರೇವಣಸಿದ್ಧ ಶಿವಾಚಾರ್ಯರು, ಸುಳ್ಳ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಬನ್ನಿಕೊಪ್ಪ ಸುಜ್ಞಾನದೇವ ಶಿವಾಚಾರ್ಯರು, ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು, ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು, ಚಳಗೇರಿ ವೀರಸಂಗಮೇಶ್ವರ ಶಿವಾಚಾರ್ಯರು, ಕಲಘಟಗಿ ರೇವಣಸಿದ್ಧೇಶ್ವರ ಶಿವಾಚಾರ್ಯರು, ಸವದತ್ತಿ ಮಲ್ಲಿಕಾರ್ಜುನ ಶಿವಾಚಾರ್ಯರು, ಶಿರಕೋಳ ಗುರುಸಿದ್ಧೇಶ್ವರ ಶಿವಾಚಾರ್ಯರು, ಗಿರಿಸಾಗರ ರುದ್ರಮುನಿ ಶಿವಾಚಾರ್ಯರು, ಬಿಲ್ವಕೆರೂರು ಸಿದ್ಧಲಿಂಗ ಶಿವಾಚಾರ್ಯರು, ಪುಣ್ಯಕೋಟಿ ಮಠದ ಜಗದೀಶ್ವರ ಸ್ವಾಮಿಗಳು, ಲಕ್ಷ್ಮೇಶ್ವರದ ಮಳೆಮಲ್ಲಿಕಾರ್ಜುನ ಶಿವಾಚಾರ್ಯರು, ಶಿವಗಂಗೆ ಮಲಯ ಶಾಂತಮುನಿ ಶಿವಾಚಾರ್ಯರು, ನಾಗಣಸೂರು ಶ್ರೀಕಂಠ ಶಿವಾಚಾರ್ಯರು, ಕಲಾದಗಿ ಗಂಗಾಧರ ಶಿವಾಚಾರ್ಯರು, ಮಂಗಳೂರು ಸಿದ್ಧಲಿಂಗ ಶಿವಾಚಾರ್ಯರು ಪಾಲ್ಗೊಂಡಿದ್ದರು.

ಸಮಾರಂಭದ ಅಧ್ಯಕ್ಷತೆಯನ್ನು ನೊಣವಿನಕೆರೆ ಡಾ.ಕರಿವೃಷಭ ಶಿವಯೋಗೀಶ್ವರ ಸ್ವಾಮಿಗಳು ವಹಿಸಿದ್ದರು. ಸಮಾರಂಭಕ್ಕೂ ಮುನ್ನ ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ಸಂಭ್ರಮದಿಂದ ಜರುಗಿತು. ಬಾಳೆಹೊನ್ನೂರು ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ವಿಠಲಾಪುರ ಹಿರೇಮಠದ ಗಂಗಾಧರಸ್ವಾಮಿ ಅವರಿಂದ ಭಕ್ತಿ ಗೀತೆ ಜರುಗಿತು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಮಲೆಬೆನ್ನೂರಿನ ಸದ್ಭಕ್ತರು ಅನ್ನದಾಸೋಹ ನೆರವೇರಿಸಿದರು.

# ಜೀವನ ಮಟ್ಟ ಸುಧಾರಣೆಗೆ 'ಗ್ಯಾರಂಟಿ'

▸▸ ಮೊದಲನೇ ಪುಟದಿಂದ

ಜಿಲ್ಲಾ ಮಟ್ಟದ ಪ್ರಾಧಿಕಾರದ ಗಮನಕ್ಕೆ ತಂದು ಪರಿಹರಿಸಿಕೊಳ್ಳಬಹುದಾಗಿದೆ ಎಂದರು.

ಈ ಸಂದರ್ಭದಲ್ಲಿ ಮಲ್ಲಪ್ಪ ದಂಡಿನ, ಗಣೇಶಸಿಂಗ್ ಮಿಠಡೆ, ಸಾವಿತ್ರಿ ಹೂಗಾರ, ಮಲ್ಲು ಬಾರಕೇರ, ಅಜ್ಜಪ್ಪ ಹುಗ್ಗೆಣ್ಣವರ,ದೇಸಾಯಿ, ಮೀನಾಕ್ಷಿ ಬೆನಕಣ್ಣವರ, ಯಲಿಶಿರೂರ ಗ್ರಾಮದ ನಿಂಗನಗೌಡ ಪಾಟೀಲ, ಗಂಗಯ್ಯ ಹಿರೇಮಠ, ಪರಶುರಾಮ ಹುಗಾರ, ಸುರೇಶ ಹೊಸಮನಿ, ಮಂಜುನಾಥ ಯಲಿ, ಮಂಜುನಾಥ ಭಜಂತ್ರಿ, ಶರಣಪ್ಪ ಡೋಣಿ, ತಾಜುದ್ದೀನ ಹೊಂಬಳ, ಕೊಟ್ರೇಶ ಕುಂದ್ರಳ್ಳಿ ಹರ್ತಿ ಗ್ರಾಮದಲ್ಲಿ ಪಿಡಿಓ ಶಿವಲೀಲಾ ಅಂಗಡಿ, ಬಿ.ಟಿ. ಸೋಮರಡ್ಡಿ, ಮಹೇಶ ಪಟ್ಟಣಶೆಟ್ಟಿ,ಪಿ.ಎಸ್. ಪಾಟೀಲ, ಎಫ್.ಎಸ್ ಪಾಟೀಲ, ಮಂಜುಳಾ ಬುದ್ದಪ್ಪನವರ, ಮುತ್ತು ನೀಲಗುಂದ, ಅಮರ ಕುರ್ತಕೋಟಿ, ಬಸವರಾಜ ಗಣಾಚಾರಿ, ಎಸ್.ವ್ಹಿ. ಕೋರಿ, ಶೇಖಪ್ಪ ಹುಡೇದ ಸೇರಿದಂತೆ ಮತ್ತಿತರರಿದ್ದರು.

# ದಾರ್ಶನಿಕರ ಬದುಕು ಎಲ್ಲರಿಗೂ ದಾರಿದೀಪ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜೋಡ ಮಾರುತಿ ದೇವಸ್ಥಾನದಲ್ಲಿ ವಿಶ್ವ ಹಿಂದೂ ಪರಿಷತ್ ನೇತೃತ್ವದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಯಿತು.

ಯಶವಂತ ಕಾಂಬ್ಳೆಕರ್ ಮಾತನಾಡಿ, ವಾಲ್ಮೀಕಿಯವರ ರಾಮಾಯಣದಿಂದ ಜಗತ್ತಿಗೆ ಪ್ರಭು ಶ್ರೀರಾಮಚಂದ್ರ, ಲಕ್ಷ್ಮಣ, ಸೀತಾದೇವಿ, ಹನುಮಂತ ಹಲವಾರು ದೇವತೆಗಳ ಪರಿಚಯವಾಯಿತು. ರಾಮಾಯಣ ಕೇವಲ ಕಥಾ ಹಂದರವಲ್ಲ. ಜಗತ್ತಿಗೆ ಒಳಿತು-ಕೆಡುಕುಗಳ ಹಾಗೂ ದುಷ್ಟಶಕ್ತಿಯ ದಮನಕ್ಕೆ ಶಿಷ್ಟರ ರಕ್ಷಣೆಗೆ ಅವತಾರ ತಾಳಿದ ಪ್ರಭು ಶ್ರೀರಾಮಚಂದ್ರನ ಅವತಾರ ಇಂದಿಗೂ ಮಾದರಿಯಾಗಿದೆ. ವಾಲ್ಮೀಕಿ, ಬುದ್ಧ, ಬಸವ, ಅಂಬೇಡ್ಕರರಂತಹ ಹಲವಾರು ಮಹಾನ್ ವ್ಯಕ್ತಿಗಳು ಕೇವಲ ಜಾತಿಗೆ ಸೀಮಿತರಾಗಿಲ್ಲ. ಜಗತ್ತಿನ ಎಲ್ಲ ಸಮುದಾಯದವರು ಅವರ ಬದುಕು, ಬರಹ, ಮಾರ್ಗದರ್ಶನ ಇಂದಿಗೂ ಅನುಕರಣೀಯವಾಗಿದೆ. ಹೀಗಾಗಿ ಇಂತಹ ದಾರ್ಶನಿಕರ ಜಯಂತಿಯನ್ನು ಆಚರಿಸುತ್ತಿರುವುದು ಹೆಮ್ಮೆಯ ವಿಷಯ ಎಂದು ಹೇಳಿದರು. ಶ್ರೀನಿವಾಸ ಹುಬ್ಬಳ್ಳಿ ಸ್ವಾಗತಿಸಿದರು. ವಿಶ್ವ ಹಿಂದೂ ಪರಿಷತ್‌ನ ಜಿಲ್ಲಾಧ್ಯಕ್ಷ ಶ್ರೀಧರ್ ಕುಲಕರ್ಣಿ, ಉಪಾಧ್ಯಕ್ಷ ವೀರಣ್ಣ ಹೇಮಾದ್ರಿ, ಮಾರುತಿ ಪವಾರ, ರತ್ನಾ ಹೇಮಾದ್ರಿ, ಬಸವರಾಜ ಕುರಗೋಡ, ಕಲ್ಮೇಶ್ವರಯ್ಯ ಹಿರೇಮಠ, ಜಗದೀಶ ಪೂಜಾರ, ಚಂದ್ರು ಮುಂಡರಗಿ, ಪ್ರಶಾಂತ ನಾಯ್ಕರ, ಸುಂದರರಾಜ ಉಪಸ್ಥಿತರಿದ್ದರು. ಕಾರ್ಯದರ್ಶಿಗಳಾದ ವೀರೇಶ ಮಡಿವಾಳರ ವಂದನಾರ್ಪಣೆ ಮಾಡಿದರು.

# ನಿಧನ

## ಶಿವಮ್ಮ ಜಕ್ಕಲಿ



**ಶಿರಹಟ್ಟಿ:** ತಾಲೂಕಿನ ಸುಗನಹಳ್ಳಿ ಗ್ರಾಮದ ಶಿವಮ್ಮ ಬಸವಣ್ಣೆಪ್ಪ ಜಕ್ಕಲಿ (73) ಇವರು ಬುಧವಾರ ರಾತ್ರಿ ನಿಧನರಾದರು. ಮೃತರು ಪತಿ, ಪುತ್ರ, ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

**ಗದಗ ಜಿಲ್ಲೆಯ ಹುಲಕೋಟಿ ಆಸ್ಪತ್ರೆ ಮೂತ್ರಪಿಂಡ ಕಸಿ ಮಾಡುವಿಕೆ ಬಗೆಗೆ ಇಟಲಿ ವೈದ್ಯರ ಶ್ಲಾಘನೆ**

# ಕೈಗೆಟುಕುವ ವೆಚ್ಚದಲ್ಲಿ ಮೂತ್ರಪಿಂಡ ಕಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿ ವೈದ್ಯ, ಯುರಾಲಾಜಿಸ್ಟ್ ಹಾಗೂ ಕಸಿ ಶಸ್ತ್ರಚಿಕಿತ್ಸಕ ಇಟಲಿಯಲ್ಲಿ ಗ್ರಾಮೀಣ ಭಾಗದ ಆಸ್ಪತ್ರೆ ಒಂದು ಹೇಗೆ ಒಂಭತ್ತು ಕಿಡ್ನಿ ಕಸಿ ಆಪರೇಷನ್ ಮಾಡುವಲ್ಲಿ ಯಶಸ್ವಿಯಾಯಿತು ಎಂದು ವಿವರಿಸಿದರು. ಇದು ಹುಲಕೋಟಿ ಖಖಖ ಆಸ್ಪತ್ರೆಯ ಅಂಗಾಂಗ ಕಸಿ ತಂಡಕ್ಕೆ ಮತ್ತೊಂದು ಹೆಮ್ಮೆಯ ಗರಿಯಾಗಿದೆ.




ಇಟಲಿ ಮತ್ತು ಇತರ ದೇಶಗಳ ಮೂತ್ರಪಿಂಡ ಕಸಿ ಶಸ್ತ್ರಚಿಕಿತ್ಸಕರು ಕೈಗೆಟುಕುವ ವೆಚ್ಚದಲ್ಲಿ ಗ್ರಾಮೀಣ ಆಸ್ಪತ್ರೆಯಲ್ಲಿ ಕಸಿ ಮಾಡುವಿಕೆಯನ್ನು ಬೆಂಬಲಿಸಲು ಆಸಕ್ತಿ ತೋರಿಸಿದ್ದಾರೆ. ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಡಾ. ಅವಿನಾಶ್ ಓದುಗೌಡರ್, ಇಟಲಿಯ ಸಿಸಿಲಿಯ ವಲ್ಕಾನೊದಲ್ಲಿ ನಾಲ್ಕನೇ ಅಂತಾರಾಷ್ಟ್ರೀಯ ಕಾಂಗ್ರೆಸ್‌ಗೆ ಹಾಜರಾಗಲು ಆಹ್ವಾನವನ್ನು ಪಡೆದ ನಂತರ ಇಟಲಿಗೆ ಭೇಟಿ ನೀಡಿದರು. ಗದಗ ಜಿಲ್ಲೆಯ ಗ್ರಾಮೀಣ ಆಸ್ಪತ್ರೆಯಲ್ಲಿ ಯಶಸ್ವಿ ಒಂಬತ್ತು ಕಸಿಗಳ ಬಗ್ಗೆ ಡಾ. ಅವಿನಾಶ್ ಹೇಳಿದರು. ಈ ಪರಿಕಲ್ಪನೆಯನ್ನು ಇಟಲಿಯ ವೈದ್ಯರು ಹೆಚ್ಚು ಮೆಚ್ಚಿಕೊಂಡರು ಮತ್ತು ಅವರು ಸಹ ಈ ಉದಾತ್ತ ಕಾರ್ಯವನ್ನು ಬೆಂಬಲಿಸಲು ಆಸಕ್ತಿ ವ್ಯಕ್ತಪಡಿಸಿದರು.

ಹಲವಾರು ಯಶಸ್ವಿ ಮೂತ್ರಪಿಂಡ ಕಸಿ ಮಾಡಿದ ನಂತರ, ಈಗ ಕೆ.ಹೆಚ್. ಪಾಟೀಲ್ ಗ್ರಾಮೀಣ ಆಸ್ಪತ್ರೆಯು ಅಗತ್ಯವಿರುವ ಗ್ರಾಮೀಣ ಸಮುದಾಯಗಳಿಗೆ ಕಡಿಮೆ ವೆಚ್ಚದ ಚಿಕಿತ್ಸೆಗಳೊಂದಿಗೆ ಸಹಾಯ ಮಾಡಲು ಲಿವರ್ ಕಸಿ ಸೌಲಭ್ಯವನ್ನು ಸ್ಥಾಪಿಸಲು ಯೋಜಿಸುತ್ತಿದೆ. ಸಾಮಾನ್ಯ ಜನರಿಗೆ ಮೂತ್ರಪಿಂಡ ಕಸಿ ಒಂದು ಕನಸಾಗಿದೆ. ಆದರೆ ಗದಗ ಜಿಲ್ಲೆಯ ಹುಲಕೋಟಿಯಲ್ಲಿರುವ ಆರ್‌ಎಂಎಸ್‌ಎಸ್ ಕೆ.ಎಚ್. ಪಾಟೀಲ್ ಆಸ್ಪತ್ರೆ ಕಂಪೇರೆಟಿವಲಿ ಅಫಾರ್ಡಬಲ್ ಬೆಲೆಗೆ ಯಶಸ್ವಿ ಕಸಿ ಮಾಡಿದ ನಂತರ ಕನಸನ್ನು ನನಸಾಗಿಸಿತು ಮತ್ತು ಒಂದು ಕಸಿಯನ್ನು ಸಂಕಲ್ಪ ಕಿಡ್ನಿ ಕೇರ್ ಫೌಂಡೇಶನ್ ತಂಡ ಪ್ರಾಯೋಜಿಸಿದೆ. ಗದಗ ವೈದ್ಯರು ಸಹ ಅಂಗಾಂಗ ಕಸಿ ಮತ್ತು ಅಂಗಾಂಗ ದಾನದ ಬಗ್ಗೆ ಜಾಗೃತಿ ಮೂಡಿಸಲು ನೆರೆಯ ಜಿಲ್ಲೆಗಳಿಗೆ ಭೇಟಿ ನೀಡುತ್ತಿದ್ದಾರೆ.

ಆರ್‌ಎಂಎಸ್‌ಎಸ್ ಅಧ್ಯಕ್ಷ ಡಾ. ಎಸ್.ಆರ್. ನಾಗನೂರ್ ಈ ಬಗ್ಗೆ ಮಾತನಾಡಿ, ಡಾ. ಅವಿನಾಶ್, ಡಾ. ದೀಪಕ್ ಕುರಟ್ಟಿ, ಡಾ. ಪವನ್ ಕೋಳಿವಾಡ, ಡಾ. ಮೇಘನಾ, ಡಾ. ಪಂಚಗರ್, ಡಾ. ವಿಶಾಲ, ವಂದನಾ ಮತ್ತು ಹರೀಶ್ ಅವರ ಸಾಮೂಹಿಕ ಪ್ರಯತ್ನ ಇದಾಗಿದ್ದು, ಇದಕ್ಕಾಗಿ ತಂಡಕ್ಕೆ ಧನ್ಯವಾದ ಹೇಳಲು ಬಯಸುತ್ತೇನೆ. ಕಾರ್ಯದರ್ಶಿ ಡಾ. ವೇಮನ ಸಾವುಕಾರ ಮತ್ತು ತಂಡದ ಎಲ್ಲಾ ಸದಸ್ಯರಿಗೆ ನಾವು ಈ ಶ್ರೇಯಸ್ಸನ್ನು ನೀಡಲು ಬಯಸುತ್ತೇವೆ ಎಂದು ಹೇಳಿದರು.

ಗದುಗಿನ ಹಿರಿಯ ವೈದ್ಯರಾದ ಡಾ. ಪ್ಯಾರಾಲಿ ನೂರಾನಿ ಈ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಗದಗ ವೈದ್ಯರಿಗೆ ಆಹ್ವಾನ ಬಂದಿದ್ದರಿಂದ ಮತ್ತು ಇಟಾಲಿಯನ್ ವೈದ್ಯರು ನಮ್ಮ ಕೆಲಸವನ್ನು ಮೆಚ್ಚಿದ್ದರಿಂದ ನಮಗೆ ಸಂತೋಷದ ಸಂಗತಿಯಾಗಿದೆ. ಇಲ್ಲಿನ ಗ್ರಾಮೀಣ ಸಮುದಾಯಕ್ಕೆ ಸಹಾಯ ಮಾಡಲು ನಾವು ಯಕೃತ್ತು ಕಸಿ ಸೌಲಭ್ಯವನ್ನು ಸ್ಥಾಪಿಸಲು ಗಂಭೀರವಾಗಿ ಯೋಜಿಸುತ್ತಿದ್ದೇವೆ. ಎಲ್ಲಾ ಬೆಂಬಲಕ್ಕಾಗಿ ಸಚಿವ ಎಚ್.ಕೆ. ಪಾಟೀಲ್ ಅವರಿಗೆ ನಾವು ಕೃತಜ್ಞರಾಗಿರುತ್ತೇವೆ ಎಂದಿದ್ದಾರೆ.

# ಹಿಂಗಾರು ಬಿತ್ತನೆ ಬೀಜ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಆವರಣದಲ್ಲಿ ಕೃಷಿ ಇಲಾಖೆಯಿಂದ ರಿಯಾಯಿತಿ ದರದಲ್ಲಿ ಕೊಡಮಾಡುವ ಹಿಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರಿಗೆ ಸರ್ಕಾರ ಕೃಷಿ ಇಲಾಖೆಯಿಂದ ಅನೇಕ ಯೋಜನೆಗಳನ್ನು ರೂಪಿಸಿ ಜಾರಿಗೆ ತಂದಿದೆ. ಅದರಲ್ಲಿ ಪ್ರಮುಖವಾಗಿ ರೈತರಿಗೆ ಬಿತ್ತನೆ ಮಾಡಲು ಅನುಕೂಲವಾಗುವಂತೆ ರಿಯಾಯಿತಿ ದರದಲ್ಲಿ ಕಡಲೆ, ಜೋಳದ ಬೀಜ ವಿತರಣೆ ಮಾಡುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಂಡು




ಬಿತ್ತನೆ ಮಾಡಿ ಉತ್ತಮ ಫಸಲು ಪಡೆಯಬೇಕು ಎಂದರು.

ಗದಗ-ಬೆಟಗೇರಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ರಮೇಶ ಜತ್ತಿ ಮಾತನಾಡಿ, ಹಿಂಗಾರು ಹಂಗಾಮು ಈಗಷ್ಟೇ ಪ್ರಾರಂಭವಾಗುತ್ತಿದ್ದು, ರೈತರು ತಮ್ಮ ಭೂಮಿಯನ್ನು ಉಳುಮೆ ಮಾಡಿ ಸಂಪೂರ್ಣವಾಗಿ ತೇವಗೊಂಡ ನಂತರ ಬೀಜಗಳನ್ನು ಬೀಜೋಪಚಾರ ಮಾಡಿ ಬಿತ್ತನೆ ಕಾರ್ಯ ಕೈಗೊಳ್ಳುವುದರಿಂದ ಹೆಚ್ಚು ಇಳುವರಿ ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಹಕಾರಿ ಸಂಘದ ಅಧ್ಯಕ್ಷ ರಾಮಪ್ಪ ಹಚ್ಚಪ್ಪನವರ ವಹಿಸಿದ್ದರು. ಈ ಸಂದರ್ಭದಲ್ಲಿ ಶರಣಪ್ಪ ಜೋಗಿನ, ಕುಬೇರಗೌಡ ಪಾಟೀಲ್, ಮಲ್ಲಿಕಾರ್ಜುನ ಇದ್ಲಿ, ಭೀಮಪ್ಪ ರಾಮಜಿ, ಬಾಳಪ್ಪ ಗಂಗರಾತ್ರಿ, ಫಕೀರಪ್ಪ ಜೋಗಿನ, ರಾಮಪ್ಪ ಗುಡ್ಲಾನೂರ, ರಾಮಣ್ಣ ಕಂಕರಿ, ಸುರೇಶ ಗುಂಡಪ್ಪನವರ, ಬಸವರಾಜ ಯತ್ನಟ್ಟಿ, ರಾಮಣ್ಣ ಗುಡ್ಲಾನೂರ, ವೆಂಕಟೇಶ ಪೂಜಾರ, ಮಂಜುನಾಥ ತುಪ್ಪದ, ರಾಮಣ್ಣ ಖಂಡ್ರೆ ಸೇರಿದಂತೆ ರೈತರು ಪಾಲ್ಗೊಂಡಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಹೊಯ್ಸಳ ಮತ್ತು ಕೆಳದಿ ಚನ್ನಮ್ಮ ಪ್ರಶಸ್ತಿ ಯೋಜನೆಯಡಿ ಜಿಲ್ಲಾ ಮಟ್ಟದ ಅಸಾಧರಣ ಪ್ರತಿಭಾ ಪುರಸ್ಕಾರಕ್ಕಾಗಿ ನಾವೀನ್ಯತೆ , ತಾರ್ಕಿಕ ಸಾಧನೆ, ಕ್ರೀಡೆ , ಕಲೆ, ಸಾಂಸ್ಕೃತಿಕ , ಸಮಾಜ ಸೇವೆ , ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಅಸಾಧಾರಣ ಪ್ರತಿಭಾ ಪುರಸ್ಕಾರ ಪ್ರಶಸ್ತಿಯನ್ನು ನೀಡಲು 5 ರಿಂದ 18 ವರ್ಷದ ಒಳಗಿನ ವಯೋಮಿತಿಯೊಳಗಿರುವ ಮಕ್ಕಳಿಗೆ ಪ್ರತಿ ಕ್ಷೇತ್ರದಲ್ಲಿ ಇಬ್ಬರು ಮಕ್ಕಳಂತೆ ಒಟ್ಟು 8 ಮಕ್ಕಳನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಪ್ರತಿ ಮಗುವಿಗೆ ತಲಾ 10,000/- ನಗದು ಮತ್ತು ಪ್ರಶಸ್ತಿ ಪತ್ರವನ್ನು ನೀಡಲಾಗುತ್ತದೆ. ಅಸಾಧಾರಣ ಸಾಧನೆ ಮಾಡಿದ ಮಕ್ಕಳು ಅಸಾಧಾರಣ ಪ್ರತಿಭಾ ಪುರಸ್ಕಾರ ಪ್ರಶಸ್ತಿಗೆ ದಿ: 29-10-2025 ರ ಸಂಜೆ 5.30 ರೊಳಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ನಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ

ಅರ್ಜಿದಾರರು ( ಜುಲೈ 31 ಕ್ಕೆ ) 5 ರಿಂದ 18 ವರ್ಷ ವಯೋಮಿತಿಯೊಳಗಿರಬೇಕು. ವಯಸ್ಸಿನ ಬಗ್ಗೆ ಜನನ ದಿನಾಂಕದ ಬಗ್ಗೆ ಜನನ ಪ್ರಮಾಣ ಪತ್ರ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಣ ಮಾಡಿಸಿದ ಪ್ರತಿ ಲಗತ್ತಿಸಬೇಕು. ಅರ್ಜಿಯನ್ನು ದ್ವಿಪ್ರತಿಯಲ್ಲಿ ಸಲ್ಲಿಸಬೇಕು. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ 006, ಜಿಲ್ಲಾ ಆಡಳಿತ ಭವನ, ಗದಗ- 582 101, ದೂರವಾಣಿ ಸಂಖ್ಯೆ 08372-227011 ಸಂಪರ್ಕಿಸಬಹುದಾಗಿದೆ.

# ಮಳೆಹಾನಿ ಪ್ರದೇಶಗಳ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಅಣ್ಣಿಗೇರಿ ಪಟ್ಟಣ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ಅ. 8ರ ಸಂಜೆಯಿಂದ ಮಧ್ಯರಾತ್ರಿಯವರೆಗೆ ಅಪಾರ ಪ್ರಮಾಣದ ಮಳೆ ಸುರಿದಿದ್ದು, ಅಣ್ಣಿಗೇರಿಯ ವಿವಿಧ ತಗ್ಗು ಪ್ರದೇಶಗಳಿಗೆ ಮಳೆ ನೀರು ನುಗ್ಗಿ, ಸಾರ್ವಜನಿಕರಿಗೆ ತೊಂದ-ರೆಯಾಗಿದೆ. ಈ ಹಿನ್ನೆಲೆಯಲ್ಲಿ ಗುರುವಾರ ಬೆಳಿಗ್ಗೆ ಪ್ರಭಾರ ಜಿಲ್ಲಾಧಿಕಾರಿ, ಜಿ.ಪಂ ಸಿಇಓ ಭುವನೇಶ ಪಾಟೀಲ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ, ಮಳೆ ಹಾನಿ ಪರಿಶೀಲಿಸಿದರು.

ಜಲಾವೃತವಾಗಿರುವ ಅಣ್ಣಿಗೇರಿಯ ಸುರಕೋಡ ಬಡಾವಣೆಗೆ ಭೇಟಿ ನೀಡಿ ಪರಿಶೀಲಿಸಿ, ಬಡಾವಣೆ ನಿವಾಸಿಗಳೊಂದಿಗೆ ಚರ್ಚಿಸಿದರು.



ತಹಸೀಲ್ದಾರ ಹಾಗೂ ಪುರಸಭೆ ಅಧಿಕಾರಿಗಳಿಗೆ ಬಡಾವಣೆಯಲ್ಲಿ ನಿಂತಿರುವ ನೀರು ಸಂಪೂರ್ಣವಾಗಿ ಹರಿದು ಹೋಗುವಂತೆ ತಕ್ಷಣ ಪರಿಹಾರ ಕ್ರಮ ಕೈಗೊಳ್ಳಲು ಮತ್ತು ಜಲಾವೃತ್ತ ಪ್ರದೇಶದ ಮನೆಗಳಲ್ಲಿನ ಸಾರ್ವಜನಿಕರಿಗೆ ಅಗತ್ಯ ನೆರವು ನೀಡಲು ಸೂಚಿಸಿದರು.

ರಸ್ತೆಯ ಪಕ್ಕದಲ್ಲಿ ಒಳಚರಂಡಿ ಕಿರಿದಾಗಿದ್ದು, ಹೂಳು ತುಂಬಿ ನೀರು ಹೊರಬರುತ್ತದೆ. ಅಣ್ಣಿಗೇರಿ ಪಟ್ಟಣದ ಸುತ್ತಲಿನ ಹಳ್ಳಿಗಳ ಜಮೀನುಗಳ ನೀರು ಪಟ್ಟಣಕ್ಕೆ ಬರುತ್ತದೆ. ಇದರಿಂದಾಗಿ ಹೆಚ್ಚು ಹಾನಿ ಆಗುತ್ತಿದೆ. ರಾಜ ಕಾಲುವೆಗೆ ಮಳೆ ನೀರು ಹರಿದು ಹೋಗಲು ಶಾಶ್ವತ ಪರಿಹಾರ ನೀಡಬೇಕು. ಅಲ್ಲದೇ ರಾಜ ಕಾಲುವೆಯನ್ನು ಅಗಲೀಕರಣ ಮಾಡಬೇಕೆಂದು ಪ್ರಭಾರ ಜಿಲ್ಲಾಧಿಕಾರಿಗಳಲ್ಲಿ ಸಾರ್ವಜನಿಕರು ಮನವಿ ಮಾಡಿದರು.

ಪಟ್ಟಣದ ಸುರಕೋಡ ಬಡಾವಣೆಯಂತೆ ರಾಜರಾಜೇಶ್ವರಿ ನಗರ, ಜೆ.ಎಸ್.ಎಸ್. ಕಾಲೋನಿಯಲ್ಲಿಯೂ ಮಳೆ ನೀರು ನಿಂತಿದ್ದು, ನಿಂತ ನೀರು ಹರಿದು ಹೋಗಲು ತಾತ್ಕಾಲಿಕವಾಗಿ ಕಾಲುವೆ ವ್ಯವಸ್ಥೆ ಮಾಡಲಾಗಿದೆ ಎಂದು ತಹಸೀಲ್ದಾರ ಎಂ.ಜಿ. ದಾಸಪ್ಪನವರ ತಿಳಿಸಿದರು.

# ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಸಂಘಗಳ ನಿಯಮಗಳು 1960 ನಿಯಮ 29–ಬಿ(8) ರನ್ವಯ ಯಾವುದೇ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕರು ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ನಿಯಮ 8–ಬಿ(8)ರನ್ವಯ ಯಾವುದೇ ಸೌಹಾರ್ದ ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕರು, ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರ ಅಥವಾ ಲೆಕ್ಕಪರಿಶೋಧನಾ ಫರ್ಮ್ ನ್ನು 2025–26ನೇ ಸಾಲಿನ ಲೆಕ್ಕಪರಿಶೋಧನೆಗೆ ನೇಮಕ ಮಾಡಿಕೊಂಡ ಬಗ್ಗೆ ವಾರ್ಷಿಕ ಮಹಾಸಭೆಯ ದಿನಾಂಕದಿಂದ 7 ದಿನಗಳೊಳಗಾಗಿ ಲೆಕ್ಕಪರಿಶೋಧಕರಿಗೆ, ಲೆಕ್ಕಪರಿಶೋಧನಾ ಫರ್ಮ್ ಗಳಿಗೆ ಮತ್ತು ಸಹಕಾರ ಸಂಘಗಳ ಲೆಕ್ಕರಿಶೋಧನಾ ನಿರ್ದೇಶಕರಿಗೆ ತಿಳಿಸಬೇಕಾಗಿದೆ.

ಈವರೆಗೂ ಸದರಿ ಮಾಹಿತಿಯನ್ನು ಸಲ್ಲಿಸದ ಸಹಕಾರ ಸಂಘಗಳು ಈ ಪ್ರಕಟಣೆಯು ಪ್ರಕಟಣೆಯಾದ 7 ದಿನಗಳೊಳಗಾಗಿ ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರನ್ನು/ಲೆಕ್ಕಪರಿಶೋಧನಾ ಫರ್ಮ್ ನ್ನು ನೇಮಕಾತಿ ಮಾಡಿಕೊಂಡಿರುವ ಬಗ್ಗೆ ಮಾಹಿತಿಯನ್ನು ಸಂಘದ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು ಹಾಗೂ ಅಧ್ಯಕ್ಷರ ರುಜುವಿನೊಂದಿಗೆ ಹಾಗೂ ವಾರ್ಷಿಕ ಮಹಾಸಭೆಯ ನಡುವಳಿ ಪ್ರತಿಯೊಂದಿಗೆ ಉಪನಿರ್ದೇಶಕರು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಜಿಲ್ಲಾ ಆಡಳಿತ ಭವನ ಕೊಠಡಿ ಸಂಖ್ಯೆ–210, ಗದಗ ಜಿಲ್ಲೆ, ಗದಗ ಇವರ ಕಚೇರಿಗೆ ಸಲ್ಲಿಸಲು ಪ್ರಕಟಣೆ ಮೂಲಕ ತಿಳಿಸಿದೆ.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ ನೇತೃತ್ವದಲ್ಲಿ ಜಿ.ಪಂ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

# ಯೋಗಾಭ್ಯಾಸದ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಮಾನಸಿಕ ಹಾಗೂ ದೈಹಿಕ ಆರೋಗ್ಯ ಬಲವರ್ಧನೆಗಾಗಿ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಯೋಗಾಭ್ಯಾಸದ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಜಿ.ಪಂ ಆಡಳಿತಾಧಿಕಾರಿ ರಮಣದೀಪ್ ಚೌಧರಿ ತಿಳಿಸಿದರು.



ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ನಡೆದ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲೆಯಲ್ಲಿ ಡೆಂಗ್ಯು ಹಾಗೂ ಚಿಕುನ್ ಗುನ್ಯಾ ರೋಗಗಳನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಕೃಷಿ ಇಲಾಖೆಯ ಉಪನಿರ್ದೇಶಕರು ಮಾತನಾಡಿ, ಜಿಲ್ಲೆಯಲ್ಲಿ ಹಿಂಗಾರು ಹಂಗಾಮು ಬಿತ್ತನೆ ಮುಂದಿನ ವಾರದಿಂದ ಪ್ರಾರಂಭವಾಗಲಿದೆ. ಹಿಂಗಾರು ಹಂಗಾಮಿಗೆ ಕಡಲೆ, ಹಿಂಗಾರಿ ಜೋಳ, ಗೋಧಿ ಸೂರ್ಯಕಾಂತಿ, ಹತ್ತಿ ಮುಖ್ಯ ಬೆಳೆಗಳಾಗಿವೆ. ರೈತರಿಗೆ ವಿತರಿಸಲು ಸದ್ಯ ರಸಗೊಬ್ಬರದ ಸಮಸ್ಯೆ ಇಲ್ಲ. ರಾಜ್ಯ ವಲಯ ಕಾರ್ಯಕ್ರಮಗಳಡಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ ಯೋಜನೆಯಡಿ ಏಪ್ರಿಲ್ 1ರಿಂದ ಆಗಸ್ಟ 31ರವರೆಗೆ 365 ಲಕ್ಷ ರೂ. ಗುರಿಯಿದ್ದು, 360.29 ಲಕ್ಷ ರೂ ವೆಚ್ಚ ಮಾಡಲಾಗಿದೆ ಮತ್ತು ಶೇ. 99 ಗುರಿ ಸಾಧಿಸಲಾಗಿದೆ. ಕೃಷಿ ಭಾಗ್ಯ ಯೋಜನೆಯಡಿ 110.00 ಲಕ್ಷ ರೂ. ಗುರಿಯಿದ್ದು, 108.25 ಲಕ್ಷ ರೂ ವೆಚ್ಚ ಮಾಡಿ ಶೇ.98ರಷ್ಟು ಗುರಿ ಸಾಧಿಸಲಾಗಿದೆ ಎಂದು ಸಭೆಗೆ ವಿವರಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಏಪ್ರಿಲ್ 1ರಿಂದ ಆಗಸ್ಟ 31ರವರೆಗೆ 53 ಡೆಂಗ್ಯು ಜ್ವರ ಪ್ರಕರಣಗಳು, 2 ಚಿಕುನ್ ಗುನ್ಯ ಪ್ರಕರಣಗಳು ಖಚಿತಪಟ್ಟಿವೆ ಎಂದು ಸಭೆಗೆ ತಿಳಿಸಿದರು. ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಶಾಲಾ ಶಿಕ್ಷಣ, ಆಯುಷ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿ.ಪಂ ಸಿ.ಇ.ಓ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಚಳಗೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ ಮಾತನಾಡಿ, ತೋಟಗಾರಿಕೆ ಕ್ಷೇತ್ರಗಳ ನಿರ್ವಹಣೆ ಯೋಜನೆಯಡಿ ಆಗಸ್ಟ್ 31ರ ಅಂತ್ಯದವರೆಗೆ 4.19 ಲಕ್ಷ ರೂ.ಗಳ ಗುರಿಯಿದ್ದು, 4.07 ಲಕ್ಷ ರೂ. ವೆಚ್ಚ ಮಾಡಿ ಶೇ. 97ರಷ್ಟು ಗುರಿ ಸಾಧಿಸಲಾಗಿದೆ. ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ 273 ಲಕ್ಷ ರೂ. ಗುರಿಯಿದ್ದು, ಆ ಪೈಕಿ 262.45 ಲಕ್ಷ ರೂ. ವೆಚ್ಚ ಮಾಡಿ ಶೇ.96ರಷ್ಟು ಗುರಿ ಸಾಧಿಸಲಾಗಿದೆ. ಬರುವ ಜನೆವರಿ ಅಥವಾ ಫೆಬ್ರುವರಿ ತಿಂಗಳಲ್ಲಿ ಇಲಾಖೆಯಿಂದ ಫಲಪುಷ್ಪ ಪ್ರದರ್ಶನವನ್ನು ಹಮ್ಮಿಕೊಳ್ಳಲು ಯೋಜಿಸಲಾಗಿದೆ ಎಂದು ತಿಳಿಸಿದರು.

ರೋಟರಿ ಕ್ಲಬ್ ಸಾಪ್ತಾಹಿಕ ಸಭೆಯಲ್ಲಿ ಡಾ. ದೀಪಾ ಎಸ್.ಪಾಟೀಲ್ ಕಿವಿಮಾತು

# ಆಹಾರದ ಕಲಬೆರಕೆ ಅನಾರೋಗ್ಯಕ್ಕೆ ಹಾದಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಲುಷಿತ ಹಾಗೂ ಕಲಬೆರಕೆ ಆಹಾರ ಮನುಷ್ಯರ ಮೇಲೆ ಗಂಭೀರ ಪರಿಣಾಮ ಬೀರುತ್ತಿದ್ದು, ಅನಾರೋಗ್ಯಕ್ಕೆ ಹಾದಿಯನ್ನು ಕಲ್ಪಿಸುತ್ತದೆ. ಆದ್ದರಿಂದ ಕಲುಷಿತ ಮತ್ತು ಕಲಬೆರಕೆರಹಿತ ಶುದ್ಧ ಆಹಾರವನ್ನು ಸೇವಿಸಬೇಕೆಂದು ಮಹಾತ್ಮ ಗಾಂಧಿ ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಆಹಾರ ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗದ ಕಾರ್ಯಕ್ರಮ ಸಂಯೋಜಕರಾದ ಡಾ. ದೀಪಾ ಎಸ್.ಪಾಟೀಲ್ ಅಭಿಪ್ರಾಯಪಟ್ಟರು.




ರೋಟರಿ ಕ್ಲಬ್ ಗದಗ–ಬೆಟಗೇರಿ ವತಿಯಿಂದ ಹಮ್ಮಿಕೊಂಡ ಸಾಪ್ತಾಹಿಕ ಸಭೆಯಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಪ್ರತಿಯೊಂದು ಆಹಾರ ಧಾನ್ಯಗಳಲ್ಲಿ ಹಾಗೂ ಆಹಾರ ಉತ್ಪನ್ನಗಳಲ್ಲಿ ಕಲಬೆರಕೆ ಹಾಗೂ ಕಲುಷಿತ ವಸ್ತುಗಳು ಯಥೇಚ್ಛವಾಗಿ ಸೇರುವುದು ಸಾಮಾನ್ಯವಾಗಿದೆ. ಆಹಾರ ಉತ್ಪನ್ನಗಳು ಅಂದವಾಗಿ ಕಾಣಲು ಹಾಗೂ ಅತಿ ಹೆಚ್ಚು ಲಾಭವನ್ನು ಪಡೆಯಲು ಈ ಕ್ರಿಯೆಗಳು ನಡೆಯುತ್ತವೆ. ಏಕದಳಗಳ ಧಾನ್ಯಗಳಲ್ಲಿ ಕಲ್ಲುಗಳನ್ನು ಸೇರಿಸುವುದು, ದ್ವಿದಳ ಬೆಳೆಗಳಲ್ಲಿ ಹಸಿರು ಬಣ್ಣ ಕೇಸರಿ ಬಣ್ಣ ಸೇರಿಸುವುದು ಸರ್ವೇಸಾಮಾನ್ಯವಾಗಿದೆ. ಹಾಲಿನಲ್ಲಿ ನೀರು, ಸ್ಟಾರ್ಚ್, ಸಾಬೂನ ಪುಡಿ ಸೇರಿಸಿ ಮಾರಾಟ ಮಾಡುವುದು, ಕಾಳುಮೆಣಸಿನಲ್ಲಿ ಪಪ್ಪಾಯ ಬೀಜವನ್ನು ಸೇರಿಸುವುದು, ಸಾಸಿವೆಯಲ್ಲಿ ಅಜಿಮಾನ ಬೀಜಗಳನ್ನು ಬೆರೆಸುವುದನ್ನು ಕಾಣಬಹುದು ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ರೋಟರಿ ಕ್ಲಬ್ ಗದಗ–ಬೆಟಗೇರಿ ಅಧ್ಯಕ್ಷ ಡಾ. ಆರ್.ಕೆ ಗಚ್ಚಿನಮಠ ಮಾತನಾಡಿ, ಹಣ್ಣು ಮತ್ತು ತರಕಾರಿಗಳನ್ನು ಉಪಯೋಗಿಸುವ ಮೊದಲು ಉಪ್ಪಿನ ದ್ರಾವಣದಲ್ಲಿ ಅದ್ದಿ ನೀರಲ್ಲಿ ಚೆನ್ನಾಗಿ ತೊಳೆದು ಉಪಯೋಗಿಸಬೇಕು. ಆಹಾರ ಪದಾರ್ಥಗಳಲ್ಲಿ ಅಷ್ಟೇ ಅಲ್ಲದೆ ಔಷಧಿಗಳಲ್ಲೂ ಸಹ ಕಲಬೆರಕೆ ಕಂಡುಬರುತ್ತದೆ. ಇದನ್ನು ಕಠಿಣವಾದ ಕಾಯ್ದೆಯ ಮೂಲಕ, ಪರಿಣಾಮಕಾರಿಯಾಗಿ ನಿಯಂತ್ರಿಸಬಹುದಾಗಿದೆ ಎಂದರು.

ಕಾರ್ಯದರ್ಶಿ ರೊ. ಸುರೇಶ್ ಪ್ಪಿ.ಕುಂಬಾರ ನಿರೂಪಿಸಿ ವಂದಿಸಿದರು. ರೊ. ಅಕ್ಷಯ್ ಶೆಟ್ಟಿ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಕಾರ್ಯಕ್ರಮದಲ್ಲಿ ರೊ. ಆರ್.ಬಿ. ಉಪ್ಪಿನ್, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಎಂ.ಆರ್. ಕುಲಕರ್ಣಿ, ರೊ. ಮಹಾಂತೇಶ ಬಾತಾಖಾನಿ, ರೊ. ಡಾ. ಶೇಖರ ಡಿ.ಸಜ್ಜನರ, ರೊ. ಬಾಲಕೃಷ್ಣ ಕಾಮತ್ ಮುಂತಾದವರು ಇದ್ದರು.

# ಕಾಂಗ್ರೆಸ್ ಮುಖಂಡರಿಗೆ ಸನ್ಮಾನ




■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರಕ್ಕೆ ಆಗಮಿಸಿದ್ದ ಕರ್ನಾಟಕ ರಾಜ್ಯ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಂಜುನಾಥಗೌಡ, ರಾಜ್ಯ ಯುವ ಕಾಂಗ್ರೆಸ್ ಉಸ್ತುವಾರಿ, ರಾಷ್ಟ್ರೀಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ನಿಗಮ ಭಂಡಾರಿ, ರಾಜ್ಯ ಯುವ ಕಾಂಗ್ರೆಸ್ ಉಪಾಧ್ಯಕ್ಷ ಅಬ್ದುಲ್ ದೇಸಾಯಿಯವರನ್ನು ಗದಗ–ಬೆಟಗೇರಿ ಶಹರ ಯುವ ಕಾಂಗ್ರೆಸ್ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೆ.ಎಚ್. ಪಾಟೀಲ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಗದಗ–ಬೆಟಗೇರಿ ಶಹರ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅನ್ವರಭಾಷಾ ನದಾಫ್, ಮುಳಗುಂದ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಅಜ್ಜಪ್ಪ ಹುಗ್ಗೆಣ್ಣವರ, ನಗರಸಭೆ ಸದಸ್ಯ ಚಂದ್ರು ಕರಿಸೋಮನಗೌಡ್ರ, ಶಾರುಖ ಹುಯಿಲಗೋಳ, ಅಭಿಷಯ ಅಬ್ಬಿಸ್, ಧಾರವಾಡ ಗ್ರಾಮೀಣ ಅಧ್ಯಕ್ಷ ಅರ್ಜುನ ಪಾಟೀಲ, ರಾಜ್ಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಉದಯ ವೀರನಗೌಡ, ಅಹ್ಮದ ಖಾಜಿ, ಸಂತೋಷ ರಾಮೇನಹಳ್ಳಿ, ಗಣೇಶ ಕಟಗಿ, ರಾಜು ಅಸೂಟಿ, ಕಿರಣ ಕಟ್ಟಿಮನಿ, ಮಲ್ಲಪ್ಪ ಬಾರಕೇರ, ಹಸನ ಓಲೇಕಾರ, ಮಹಮ್ಮದಸಾಬ ಬೆಟಗೇರಿ, ಮುನ್ನಾ ಢಾಲಾಯತ, ಸದ್ದಾಮ ನದಾಫ್, ಮೆಹಬೂಬ ಬಳ್ಳಾರಿ, ರಾಜು ಅಣ್ಣಿಗೇರಿ, ಸೈಯ್ಯದ ಗುಜಮಾಗಡಿ, ಸಮೀರ ಕೊಟ್ಟೂರು, ಅಣ್ಣಪ್ಪ ಗಾರವಾಡ, ಮಲ್ಲಪ್ಪ ದಂಡಿನ, ಬಾಲಕೃಷ್ಣ ಲಂಕೆನ್ನವರ, ಚಂದ್ರು ಹಿರೇಮಠ, ಯಲ್ಲಪ್ಪ ಕುರಟ್ಟಿ, ಶಿವಾನಂದ ಕರೆಣ್ಣವರ, ರಾಮಕೃಷ್ಣ ತಳವಾರ, ಮೈಬು ಯಕ್ಲಾಸಪೂರ, ಚನ್ನಪ್ಪ ಬ್ಯಾಹಟ್ಟಿ ಮುಂತಾದವರು ಉಪಸ್ಥಿತರಿದ್ದರು.

# ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ಸಾಲ ಯೋಜನೆ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ 2025–26ನೇ ಸಾಲಿಗೆ ವಿಪ್ರ ಸ್ವ–ಉದ್ಯಮ ನೇರ ಸಾಲ ಯೋಜನೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಬ್ರಾಹ್ಮಣ ಸಮುದಾಯದವರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಮಾಜದ ಮುಖಂಡ ಗುರಣ್ಣ ಬಳಗಾನೂರ ವಿನಂತಿಸಿದರು.

ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು ಈ ಯೋಜನೆ ಸಹಕಾರಿಯಾಗಲಿದೆ. ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ನೇರವಾಗಿ ಸಾಲ ಹಾಗೂ ಸಹಾಯಧನವನ್ನು ಮಂಜೂರು ಮಾಡುವ ಉದ್ದೇಶ ಇದಾಗಿದೆ ಎಂದರು.

ಈ ಯೋಜನೆಯಡಿ ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ ಇತ್ಯಾದಿ ವ್ಯಾಪಾರ ವಹಿವಾಟುಗಳನ್ನು ಕೈಗೊಳ್ಳಲು ಕನಿಷ್ಠ 1 ಲಕ್ಷದಿಂದ ಗರಿಷ್ಠ 2 ಲಕ್ಷದವರೆಗೆ ಆರ್ಥಿಕ ನೆರವು ನೀಡಲಾಗುತ್ತದೆ. ಬ್ರಾಹ್ಮಣ ಸಮುದಾಯದವರು ಈ ಅವಕಾಶವನ್ನು ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಶ್ರೀನಿವಾಸ ಹುಯಿಲಗೋಳ ಅರ್ಹತಾ ಮಾನದಂಡಗಳನ್ನು ವಿವರಿಸಿ, ನೇರ ಸಾಲ ಯೋಜನೆಗೆ ಅರ್ಜಿ ಸಲ್ಲಿಸುವವರು ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದ್ದರೆ, ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ಪ್ರಮಾಣಪತ್ರ ಹೊಂದಿರಬೇಕು. ಅಲ್ಲದೆ, ಕರ್ನಾಟಕ ರಾಜ್ಯದ ಖಾಯಂ ನಿವಾಸಿಗಳಾಗಿರಬೇಕು. 18ರಿಂದ 65 ವರ್ಷದೊಳಗಿನವರಾಗಿರಬೇಕು ಎಂದು ತಿಳಿಸಿದರು.

ಈ ಯೋಜನೆಯಲ್ಲಿ ಮಹಿಳೆಯರಿಗೆ ಶೇ. 33ರಷ್ಟು ಹಾಗೂ ವಿಶೇಷ ಚೇತನರಿಗೆ ಶೇ. 5ರಷ್ಟು ಮೀಸಲಾತಿ ನೀಡಲಾಗಿದೆ. ಆಸಕ್ತರು ಅಕ್ಟೋಬರ್ 31ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ವಿಡಿಎಸ್‌ಟಿ ಶಾಲೆಗೆ ಬಂದು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅನಿಲ್ ತಂಬದಮನಿ, ವೆಂಕಟೇಶ ಕುಲಕರ್ಣಿ, ಗಿರೀಶ ಕುಲಕರ್ಣಿ, ಕೃಷ್ಣ ಪೂಜಾರ, ಈರಣ್ಣ ಪೂಜಾರ, ಅರವಿಂದ ರಾಜಪುರೋಹಿತ, ಸಂತೋಷ ಪಾಟೀಲ ಮುಂತಾದವರು ಹಾಜರಿದ್ದರು.

# ನೇಮಕಾತಿ ಪ್ರಕಟಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ(ಕಭೀ) ಕಾರ್ಯಕ್ರಮದಡಿಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಗುತ್ತಿಗೆ ಆಧಾರದ ಮೇಲೆ ನ್ಯೂರಾಲಾಜಿಸ್ಟ್/ಫಿಜಿಷಿಯನ್/ವೈದ್ಯಕೀಯ ಅಧಿಕಾರಿ–01, ಫಿಜಿಯೋಥೆರಪಿಸ್ಟ್ –01, ಸ್ಪೀಚ್ ಥೆರಪಿಸ್ಟ್–01, ಹುದ್ದೆಗಳನ್ನು ಪ್ರತಿ ಸೋಮವಾರ roll out ಮಾದರಿಯಲ್ಲಿ ನೇರ ಸಂದರ್ಶನದ ಮೆರಿಟ್ ಆಧರಿಸಿ ಭರ್ತಿ ಮಾಡಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಕೊಠಡಿ ಸಂಖ್ಯೆ –101, ಜಿಲ್ಲಾಡಳಿತ ಭವನ ಗದಗದಲ್ಲಿ ಹೆಚ್ಚಿನ ಮಾಹಿತಿಗಾಗಿ ವೆಬ್ಸೈಟ್: https://gadag.nic.in ನಲ್ಲಿ ವೀಕ್ಷಿಸಬಹುದು ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಲಕ್ಕುಂಡಿಯ ಗ್ರಾಮೀಣ ವಿದ್ಯಾವರ್ಧಕ ಸಂಸ್ಥೆಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಮೂಲಕ ವಾಲ್ಮೀಕಿ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಆರ್.ಬಿ. ಬರದ್ವಾಡ, ಹಿರಿಯ ಶಿಕ್ಷಕ ಬಸವರಾಜ ಗರ್ಜಪ್ಪನವರ, ಎ.ಎಂ. ದಂಡಿನ, ಅರ್ಜುನ ಚಲವಾದಿ, ಆರ್.ಎಂ. ದಂಡಿನ, ಪಿ.ಬಿ. ಬರದ್ವಾಡ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ. 1ರ ವ್ಯವಸ್ಥಾಪಕ ಶರಣಪ್ಪ ಗರ್ಜಪ್ಪನವರ, ಇಸ್ಮಾಯಿಲ್ ಕೊರ್ಲಹಳ್ಳಿ ಇದ್ದರು.

# ದಾಳಿ ಯತ್ನದ ನಂತರ ಸಿಜೆಐ ಜಾತಿ ನಿಂದಿಸಿ ಪೋಸ್ಟ್ : 100ಕ್ಕೂ ಹೆಚ್ಚು ಸಾಮಾಜಿಕ ಮಾಧ್ಯಮ ಖಾತೆಗಳ ವಿರುದ್ಧ ಎಫ್ಐಆರ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸುಪ್ರೀಂ ಕೋರ್ಟ್‌ನಲ್ಲಿ ವಕೀಲನಿಂದ ಶೂ ಎಸೆತ ಪ್ರಯತ್ನದ ಬಳಿಕ, ಮುಖ್ಯ ನ್ಯಾಯಮೂರ್ತಿ ಬಿ. ಆರ್ ಗವಾಯಿ ಅವರ ಜಾತಿ ಗುರಿಯಾಗಿಸಿ ನಿಂದನಾತ್ಮಕ ಪೋಸ್ಟ್‌ಗಳನ್ನು ಹಾಕಿದ 100ಕ್ಕೂ ಹೆಚ್ಚು ಸಾಮಾಜಿಕ ಮಾಧ್ಯಮ ಖಾತೆಗಳ ವಿರುದ್ಧ ಪಂಜಾಬ್ ಪೊಲೀಸರು ಬುಧವಾರ (ಅ.8) ಹಲವು ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ ಎಂದು ವರದಿಯಾಗಿದೆ.

ಉನ್ನತ ಸಾಂವಿಧಾನಿಕ ಹುದ್ದೆಯಲ್ಲಿರುವ ವ್ಯಕ್ತಿಯ ಜಾತಿ ನಿಂದನೆ ಮಾಡುವ ಮತ್ತು ಕೋಮು ದ್ವೇಷವನ್ನು ಪ್ರಚೋದಿಸುವ ಪೋಸ್ಟ್‌ಗಳನ್ನು ಹಾಕುವ ಮೂಲಕ ಶಾಂತಿ–ಸುವ್ಯವಸ್ಥೆಯನ್ನು ಕದಡಲು ಪ್ರಯತ್ನಿಸಿದ ಸಾಮಾಜಿಕ ಮಾಧ್ಯಮ ಖಾತೆಗಳ ವಿರುದ್ಧ ಕಾನೂನಿನ ಪ್ರಕಾರ ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ ಎಂದು ಪಂಜಾಬ್ ಪೊಲೀಸ್ ವಕ್ತಾರರು ತಿಳಿಸಿದ್ದಾಗಿ ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ.

ಸಾಮಾಜಿಕ ಜಾಲತಾಣಗಳ ಪೋಸ್ಟ್‌ಗಳು ಮತ್ತು ವಿಡಿಯೋಗಳು ಕೋಮು ಸೌಹಾರ್ದತೆ, ಶಾಂತಿ–ಸುವ್ಯವಸ್ಥೆಯನ್ನು ಕದಡುವ ಮತ್ತು ನ್ಯಾಯಾಂಗ ಸಂಸ್ಥೆಗಳ ಮೇಲಿನ ಗೌರವವನ್ನು ಕುಗ್ಗಿಸುವ ಉದ್ದೇಶದಿಂದ ಜಾತಿವಾದ ಮತ್ತು ದ್ವೇಷ ತುಂಬಿದ ಅಭಿವ್ಯಕ್ತಿಗಳನ್ನು ಒಳಗೊಂಡಿವೆ ಎಂದು ಪೊಲೀಸ್ ವಕ್ತಾರರು ಹೇಳಿದ್ದಾರೆ.

# ನನ್ನ ಮತ ನನ್ನ ಹಕ್ಕು ; ವಿದ್ಯಾರ್ಥಿಗಳಿಗಾಗಿ ಸ್ಪರ್ಧೆ

■ ವಿಜಯಸಾಕ್ಷಿ ಸುದ್ದಿ, ಗದಗ

ದಿ. 15–9–2025 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಆಚರಿಸಲಾಗಿದ್ದು, ಅದರ ಅಂಗವಾಗಿ ನನ್ನ ಮತ ನನ್ನ ಹಕ್ಕು ಕುರಿತು ಎಲ್ಲ ಸರ್ಕಾರಿ/ ಖಾಸಗಿ ಅನುದಾನಿತ ಪಾಲಿಟೆಕ್ನಿಕ್ / ಇಂಜಿನೀಯರಿಂಗ್ ಕಾಲೇಜುಗಳಲ್ಲಿಯ ವಿದ್ಯಾರ್ಥಿಗಳಿಗೆ ಛಾಯಾಗ್ರಹಣ ( ಫೋಟೋಗ್ರಾಫಿ ಕಾಂಪಿಟೇಷನ್) ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಮತದಾನದ ಹಕ್ಕಿನ ಕುರಿತಾದ ಛಾಯಾಗ್ರಹಣದ (ಫೋಟೋಗ್ರಾಫಿ) ಚಿತ್ರಗಳನ್ನು ಅಕ್ಟೋಬರ್ 31 ರೊಳಗಾಗಿ https:www.democracy-daykarnataka.in ಇಲಾಖೆಯ ವೆಬ್ ಸೈಟ್ ನಲ್ಲಿ ಅಪ್ಲೋಡ್ ಮಾಡಲು ಎಲ್ಲ ಸರ್ಕಾರಿ / ಖಾಸಗಿ ಅನುದಾನಿತ ಪಾಲಿಟೆಕ್ನಿಕ್ ಮತ್ತು ಇಂಜಿನೀಯರಿಂಗ್ ಕಾಲೇಜುಗಳಲ್ಲಿಯ ವಿದ್ಯಾರ್ಥಿಗಳಿಗೆ ಕೋರಿದೆ. ಸ್ಪರ್ಧೆಯಲ್ಲಿ ಭಾಗವಹಿಸಿದ ಮೊದಲ ಮೂರು ಸ್ಪರ್ಧಾಳುಗಳಿಗೆ ನಗದು ಬಹುಮಾನ ನೀಡಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸದಾಗಿ ಮತದಾರರ ನೋಂದಣಿಗೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ ಕರ್ನಾಟಕ ವಿಧಾನ ಪರಿಷತ್ತಿನ ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರಕ್ಕೆ ಅರ್ಹತಾ ದಿನಾಂಕವಾಗಿ 1–11–2025ನ್ನು ನಿಗದಿಪಡಿಸಿ ಮತದಾರರ ಪಟ್ಟಿಯ ಡಿ–ನೋವೋ ತಯಾರಿ–ಕೆ ವೇಳಾಪಟ್ಟಿ ಹೊರಡಿಸಿ ಅದರಂತೆ ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದ ಇಆರ್‌ಓ, ಎಇಆರ್‌ಓ ಮತ್ತು ಡೆಸಿಗ್ನೇಟೆಡ್ ಆಫೀಸರ್ ವಿವರಗಳನ್ನು ಪ್ರಚುರಪಡಿಸಲಾಗಿದೆ.

ಕರ್ನಾಟಕ ವಿಧಾನ ಪರಿಷತ್ತಿನ ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರ ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಲು ಅರ್ಜಿದಾರರು ಆಯಾ ಮತಕ್ಷೇತ್ರದೊಳಗಡೆ ಸಾಮಾನ್ಯವಾಗಿ ವಾಸಿಸುತ್ತಿರುವ ಹಾಗೂ 1ನೇ ನವೆಂಬರ್ 2025ಕ್ಕೆ ಮುಂಚೆ ಕನಿಷ್ಠ ಮೂರು ವರ್ಷಗಳ ಮೊದಲು ಭಾರತದಲ್ಲಿರುವ ಯಾವುದಾದರೊಂದು ವಿಶ್ವವಿದ್ಯಾಲಯದ ಪದವೀಧರನಾಗಿರುವ ಅಥವ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರುವ ಪ್ರತಿಯೊಬ್ಬ ವ್ಯಕ್ತಿಯೂ ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ.

ಅಗತ್ಯ ದಾಖಲಾತಿಯೊಂದಿಗೆ ನಮೂನೆ–18ರಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಸಹಾಯಕ ಮತದಾರರ ನೊಂದಣಾಧಿಕಾರಿ, ತಹಸೀಲ್ದಾರ ಗದಗ, ಸಹಾಯಕ ಮತದಾರರ ನೋಂದಣಾಧಿಕಾರಿ ಹಾಗೂ ಪೌರಾಯುಕ್ತರು, ಗದಗ–ಬೆಟಗೇರಿ ನಗರಸಭೆ ಇವರ ಕಾರ್ಯಾಲಯದಲ್ಲಿ ಸಲ್ಲಿಸಬೇಕು. 30.09.2025ರಿಂದ 06.11.2025ರವರೆಗೆ ಸ್ವೀಕೃತ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಜಿಯನ್ನು ವಿಲೇಗೊಳಿಸಿ 25.11.2025ರಂದು ಕರಡು ಮತದಾರ ಪಟ್ಟಿಯನ್ನು ಹೊರಡಿಸಲಾಗುವುದು. 25.11.2025ರಿಂದ 10.12.2025ರವರೆಗೆ ಕರಡು ಮತದಾರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲವಕಾಶವನ್ನು ನೀಡಲಾಗುವುದು. ಸದರಿ ಅವಧಿಯಲ್ಲಿ ಸ್ವೀಕೃತ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಜಿಗಳನ್ನು ವಿಲೇಗೊಳಿಸಿ 30.12.2025ರಂದು ಅಂತಿಮ ಮತದಾರ ಪಟ್ಟಿಯನ್ನು ಪ್ರಕಟಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಉಪವಿಭಾಗಾಧಿಕಾರಿಗಳ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ 08372–238506 ಇಲ್ಲಿಗೆ ಕರೆ ಮಾಡಬಹುದಾಗಿದೆ ಎಂದು ಗದಗ ಉಪವಿಭಾಗಾದಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

**ಪಟ್ಟಣ ಪಂಚಾಯತ ಕಾರ್ಯಾಲಯ, ಮುಳಗುಂದ–582117**
ಜಿಲ್ಲಾ ॥ ಗದಗ ರಾಜ್ಯ ॥ ಕರ್ನಾಟಕ ಪ್ರಾಥಮಿಕ ಆರೋಗ್ಯ ಕೇಂದ್ರ ಹತ್ತಿರ, ಮುಳಗುಂದ
ಪೌರಾಡಳಿತ ಇಲಾಖೆ ಇ–ಮೇಲ್: ka.mulagunda.tp@gmail.com
ವೈಬ್‌ಸೈಟ್: mulagundatown.mrc.gov.in ದೂರವಾಣಿ: 08372-280128

ಕ್ರ.ಸಂ:ಪ.ಪಂ.ಮು/ನೈರ್ಮಲ್ಯ.ವಿಭಾಗ/ಪೌ.ಬೆ.ಉ.ಅ.ದ.ಪ.ಆ/ವಹಿ– /2025–26 ದಿನಾಂಕ: 09/10/2025.

**ನೈರ್ಮಲ್ಯ ವಿಭಾಗದ ಸಿಬ್ಬಂದಿಗಳಿಗೆ ಬೆಳಿಗ್ಗಿನ ಉಪಹಾರ ಪೂರೈಸಲು ಅಲ್ಪಾವದಿ ಟೆಂಡರ್ ಪ್ರಕಟಣೆ.**

ಈ ಮೂಲಕ ಯಾವತ್ತು ಪಟ್ಟಣ ಪಂಚಾಯತಿ ವ್ಯಾಪ್ತಿಯ ಹೊಟೇಲ್ ಮಾಲೀಕರು & ಆಹಾರ ಪೂರೈಕೆದಾರರಿಗೆ ತಿಳಿಯಪಡಿಸುವುದೇನೆಂದರೆ, ಸನ್ 2025–26ನೇ ಸಾಲಿನ ರ ವರೆಗೆ ಮುಳಗುಂದ ಪಟ್ಟಣ ಪಂಚಾಯತ ಕಾರ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ನೈರ್ಮಲ್ಯ ಸಿಬ್ಬಂದಿ 34 ಜನರಿಗೆ ಉಪಹಾರದ ವೆಚ್ಚವನ್ನು ನಿಯಮಾನುಸಾರ ಸಂದಾಯ ಮಾಡಲು ಆಸಕ್ತ ಹೊಟೇಲ್ ಮಾಲೀಕರಿಂದ ಅಲ್ಪಾವಧಿ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕಟಗೊಂಡ 7 ದಿನದೊಳಗಾಗಿ ತಮ್ಮ ದರಗಳನ್ನು ನಮೂದಿಸಿ ಅಗತ್ಯ ದಾಖಲಾತಿಗಳೊಂದಿಗೆ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ ಮುಳಗುಂದ ಇವರ ಹೆಸರಿಗೆ ಸಲ್ಲಿಸುವುದು. ಅವಧಿ ಮೀರಿದ/ಅಪೂರ್ಣ ಟೆಂಡರ್ ಫಾರ್ಮಗಳನ್ನು ಮಂಜೂರ ವ ನಾಮಂಜೂರ ಮಾಡುವ ಅಧಿಕಾರ ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

| ಅನಂ | ವಿವರ | ಅಂದಾಜು ಮೊತ್ತ | ಇ.ಎಮ್.ಡಿ | ಪ್ರಮಾಣ | ದರ 1ಕ್ಕೆ |
|---|---|---|---|---|---|
| 1 | ಬೆಳಗ್ಗಿನ ಉಪಹಾರ (ಇಡ್ಲಿ, ವಡಾ, ಸೀರಾ, ಉಪ್ಪಿಟ್ಟು, ಅವಲಕ್ಕಿ, ಪಲಾವು, ಮೊಟ್ಟೆ ಇತ್ಯಾಧಿ ಒಂದು ಬಗ್ಗೆಯ ಉಪಹಾರ ಹಾಗೂ ಪ್ರತಿದಿನ ಪ್ರತಿಯೊಬ್ಬರಿಗೂ ಒಂದು ಕುದಿಸಿದ ಮೊಟ್ಟೆ ಸಹಿತ. | ರೂ.2,16,580/– | ರೂ.5,414/– | 1 ಪ್ಲೇಟ್‌ಗೆ | |

ಖಾಲಿ ಟೆಂಡರ್ ಫಾರ್ಮ ವಿತರಿಸುವ **ದಿನಾಂಕ: 10/10/2025** ರಿಂದ **16/10/2025**. ಭರ್ತಿ ಮಾಡಿದ ಟೆಂಡರ್ ಫಾರ್ಮ ಸ್ವೀಕರಿಸುವ ದಿನಾಂಕ: 23/10/2025. ಸಂಜೆ **04:30** ಘಂಟೆಯವರೆಗೆ. ಟೆಂಡರ್ ತೆರೆಯುವ **ದಿನಾಂಕ:24/10/2025** ಸಾಯಂಕಾಲ **04:30** ಘಂಟೆಗೆ ಪಟ್ಟಣ ಪಂಚಾಯತ ಕಾರ್ಯಾಲಯದಲ್ಲಿ.

ಸಹಿ/– (ಶ್ರೀ.ಮಂಜುನಾಥ ಪಿ ಗುಳೇದ)
ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ಮುಳಗುಂದ

ಸಹಿ/– (ಶ್ರೀಮತಿ.ಯಲ್ಲವ್ವ ಕೋಂ.ಬ ಕವಲೂರ)
ಅಧ್ಯಕ್ಷರು
ಪಟ್ಟಣ ಪಂಚಾಯತ ಮುಳಗುಂದ

ವಾ.ಸಾ.ಇ/ಗದಗ/323/ದೇಶಪಾಂಡೆಪಬ್ಲಿಸಿಟಿ/2025–26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka